# ನಮ್ಮ ಜನ NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 186 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 07–02–2024 ಬುಧವಾರ | ಪುಟ: 4 | ಬೆಲೆ : ರೂ.2–00
Volume - 01 Issue - 186 | Title- Code: KARKAN 28269 | Chitradurga | Date: 07-02-2024 Wednesday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಸತ್ತಮೇಲೂ ಬದುಕಿರಬೇಕಾದರೆ ಅಂಗಾಂಗ ದಾನ ಮಾಡಿ 2

ವಿದ್ಯುತ್ ಕಣ್ಣಾಮುಚ್ಚಾಲೆ: ರಿಪೇರಿಗೆ ಬಂದ ಪಂಪ್‌ಸೆಟ್‌ಗಳೊಂದಿಗೆ ಪ್ರತಿಭಟನೆ 3

ರಾಜ್ಯಮಟ್ಟದ ಬಾಪೂಜಿ ಪ್ರಬಂಧ ಸ್ಪರ್ಧೆ ವಿಜೇತರಿಗೆ ಸಿಎಂ ಬಹುಮಾನ ವಿತರಣೆ 4



ಸುದ್ದಿ, ಜಾಹಿರಾತಿಗೆ 9686622252


### ಶುಭ ನುಡಿ

ಬಟ್ಟೆ ನೋಡಿ ಗೆಳೆತನ ಮಾಡಬೇಡ,
ಗುಣ ನೋಡಿ ಗೆಳೆತನ ಮಾಡು ,
ಯಾಕೆಂದರೆ ಬಟ್ಟೆ ಹರಿದು ಹೋಗುವ
ತನಕ ಮಾತ್ರ ಇರುತ್ತದೆ, ಗುಣ
ಸಾಯುವವರೆಗೂ ಇರುತ್ತದೆ !!

» ಶುಭೋದಯ

## ಹಾಸ್ಟೆಲ್ ಸಿಬ್ಬಂದಿಗೆ ಸಂವಿಧಾನ ಪೀಠಿಕೆ ಬೋಧನೆ

# ಹಾಸ್ಟೆಲ್‌ಗಳಲ್ಲಿ ಶುಚಿತ್ವ ಕಾಪಾಡಿ

» ಚಿತ್ರದುರ್ಗ

ವಸತಿ ಶಾಲೆ ಹಾಗೂ ವಸತಿ ನಿಲಯ ವಿದ್ಯಾರ್ಥಿಗಳಿಗೆ ನಿಲಯ ಪಾಲಕರೇ ಪೋಷಕರಾಗಿದ್ದು, ವಸತಿ ನಿಲಯದ ವಿದ್ಯಾರ್ಥಿಗಳನ್ನು ತಾವುಗಳು ತಮ್ಮ ಮಕ್ಕಳ ರೀತಿಯಲ್ಲಿ ಕಾಣಬೇಕು. ತಪ್ಪು ಮಾಡಿದಾಗ ಎಚ್ಚರಿಸಿ, ಉತ್ತಮ ಕೆಲಸ ಮಾಡಿದಾಗ ಗೌರವಿಸಿ, ಪ್ರೀತಿ ತೋರಬೇಕು ಅಲ್ಲದೆ ಹಾಸ್ಟೆಲ್ ಗಳಲ್ಲಿ ಕಡ್ಡಾಯವಾಗಿ ಶುಚಿತ್ವ ಕಾಪಾಡಿಕೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹೇಳಿದರು.

ನಗರದ ತರಾಸು ರಂಗಮಂದಿರದಲ್ಲಿ ಮಂಗಳವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಸಮಾಜ ಕಲ್ಯಾಣ ಇಲಾಖಾ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ನಿಲಯಗಳು ಹಾಗೂ ವಸತಿ ಶಾಲೆಗಳ ಸಿಬ್ಬಂದಿಗಳಿಗೆ ಆಯೋಜಿಸಲಾದ ತರಬೇತಿ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.

ವಸತಿ ಶಾಲೆ ಹಾಗೂ ವಸತಿ ನಿಲಯಗಳ ಎಲ್ಲ ಸಿಬ್ಬಂದಿಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು. ಸಮನ್ವಯ ದಿಂದ ಕಾರ್ಯನಿರ್ವಹಿಸಿದರೆ ಹಾಸ್ಟೆಲ್ ಸ್ವರ್ಗವಾಗಲಿದೆ. ಇಲ್ಲವಾದರೆ ಅದು ನರಕವಾಗಲಿದೆ. ಹೊಂದಾಣಿಕೆ ಕೊರತೆ ಉಂಟಾದರೆ ಅದು ಮಕ್ಕಳ ಮೇಲೆ ದುಷ್ಪರಿಣಾಮ ಬೀಳಲಿದೆ ಎಂದರು.

ಸಾಮಾನ್ಯವಾಗಿ ಬಡತನ ರೇಖೆಗಿಂತ ಕೆಳಗಿನ ವರ್ಗದ ಮಕ್ಕಳು, ಮಧ್ಯಮವರ್ಗದ ಮಕ್ಕಳು ವಿದ್ಯಾಭ್ಯಾಸಕ್ಕಾಗಿ ಹಾಸ್ಟೆಲ್‌ನಲ್ಲಿ





ಪ್ರವೇಶಾವಕಾಶ ಪಡೆಯುತ್ತಾರೆ. ಸರ್ಕಾರ ನೀಡುವ ಅನುದಾನದಲ್ಲಿ ಹಾಸ್ಟೆಲ್ ವಿದ್ಯಾರ್ಥಿಗಳಿಗೆ ಗುಣಮಟ್ಟದ ಆಹಾರ, ನೀರು, ಶುಚಿತ್ವ ಹಾಗೂ ಉತ್ತಮ ವಾತಾವರಣ ಕಲ್ಪಿಸಬೇಕು. ಯಾವುದೇ ಕಾರಣಕ್ಕೂ ವಸತಿ ಶಾಲೆ, ಹಾಸ್ಟೆಲ್ ವಿದ್ಯಾರ್ಥಿಗಳಿಂದ ಯಾವುದೇ ರೀತಿಯಾದ ಶುಚಿತ್ವ ಕಾರ್ಯ ಆಗದೇ ರೀತಿಯಲ್ಲಿ ಎಚ್ಚರವಹಿಸಬೇಕು ಎಂದರು.

ಪ್ರಸ್ತುತ ದಿನಗಳಲ್ಲಿ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ವಸತಿ ಶಾಲೆ ಹಾಗೂ ವಿದ್ಯಾರ್ಥಿ ನಿಲಯಗಳ ವಿದ್ಯಾರ್ಥಿಗಳನ್ನು ತಯಾರು ಮಾಡುವ ನಿಟ್ಟಿನಲ್ಲಿ ಗ್ರಂಥಾಲಯ ಹಾಗೂ ದಿನಪತ್ರಿಕೆಗಳು ಅಗತ್ಯವಾಗಿ ಇರಬೇಕು.

ಇದರ ಜೊತೆಗೆ ಪ್ರತಿಭಾವಂತ ಶಿಕ್ಷಕರಿಂದ ತರಗತಿ, ಸಂಪನ್ಮೂಲ ವ್ಯಕ್ತಿಗಳಿಂದ ಕಾರ್ಯಾಗಾರ ಆಯೋಜಿಸಿ, ವಿವಿಧ ಕ್ಷೇತ್ರಗಳಲ್ಲಿನ ಸಾಧಕರನ್ನು ಕರೆಸಿ ಉಪನ್ಯಾಸ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವಂತೆ ಸಲಹೆ ನೀಡಿದರು.

ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಜಗದೀಶ್ ಹೆಬ್ಬಳ್ಳಿ ಮಾತನಾಡಿ, ಜಿಲ್ಲೆಯ ಎಲ್ಲಾ ವಸತಿ ನಿಲಯಗಳ ನಿಲಯ ಪಾಲಕರು, ವಸತಿ ಶಾಲೆಗಳ ಪ್ರಾಂಶುಪಾಲರು, ನಿಲಯ ಪಾಲಕರು, ಅಡುಗೆ ಸಿಬ್ಬಂದಿಗೆ ಪುನಶ್ಚೇತನ ತರಬೇತಿ ನೀಡಿ, ನಿಲಯ ನಿರ್ವಹಣೆ ಹೇಗೆ ಮಾಡಬೇಕು. ನಿಲಯ ನಿರ್ವಹಣೆಯಲ್ಲಿ ಯಾವ ರೀತಿಯಾಗಿ ಜಾಗೃತಿ ವಹಿಸಬೇಕು ಎನ್ನುವುದನ್ನು ತಿಳಿಸಲು ಸರ್ಕಾರದ ಆದೇಶದ ಅನ್ವಯ ತರಬೇತಿ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದರು.

ವಸತಿ ನಿಲಯದ ಸಿಬ್ಬಂದಿ ತರಬೇತಿ ಕಾರ್ಯಕ್ರಮದಲ್ಲಿ ಸಕ್ರಿಯವಾಗಿ ಪಾಲ್ಗೊಂಡು ತರಬೇತಿಯನ್ನು ಪಡೆಯಬೇಕು. ಯಾವುದೇ ಕಾರಣಕ್ಕೂ ನಿರ್ಲಕ್ಷ್ಯ ವಹಿಸಬಾರದು. ಕಲಿಕೆ ಎನ್ನುವುದು ನಿತ್ಯನಿರಂತವಾದುದು. ಹಾಗಾಗಿ ತರಬೇತಿಯಲ್ಲಿ ಪಡೆದ ಜ್ಞಾನವನ್ನು ನಿತ್ಯದ ಕೆಲಸದಲ್ಲಿ ಬಳಸಬೇಕು. ವಸತಿ ನಿಲಯಗಳನ್ನು ಸಮರ್ಪಕವಾಗಿ ನಿರ್ವಹಿಸಬೇಕು ಎಂದು ತಿಳಿಸಿದರು.

ಸಂವಿಧಾನ ಜಾಗೃತಿ ಕಾರ್ಯಕ್ರಮದ ಅಂಗವಾಗಿ ಇದೇ ಸಂದರ್ಭದಲ್ಲಿ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಓ.ಪರಮೇಶ್ವರಪ್ಪ ಅವರು ವಸತಿ ಶಾಲೆ ಹಾಗೂ ವಸತಿ ನಿಲಯದ ಸಿಬ್ಬಂದಿಗೆ ಸಂವಿಧಾನ ಪೀಠಿಕೆ ಬೋಧಿಸಿದರು.

ತರಬೇತಿ ಕಾರ್ಯಾಗಾರದಲ್ಲಿ ನಿಲಯಗಳಲ್ಲಿ ಶುಚಿತ್ವ ಕಾಪಾಡಿಕೊಳ್ಳುವ ಬಗೆ, ನಿಲಯಗಳಲ್ಲಿ ದಾಸ್ತಾನು ಕೊಠಡಿ ನಿರ್ವಹಣೆ, ಶುಚಿಯಾದ ಆಹಾರ ತಯಾರಿಕೆ ಹಾಗೂ ಆಹಾರ ಸಂರಕ್ಷಣೆ, ಸೆಪ್ಟಿಕ್ ಟ್ಯಾಂಕ್ ಹಾಗೂ ಕುಡಿಯುವ ನೀರಿನ ಸಮರ್ಪಕ ನಿರ್ವಹಣೆ ಹಾಗೂ ವಿದ್ಯಾರ್ಥಿ ನಿಲಯಗಳ ಸಮರ್ಪಕ ನಿರ್ವಹಣೆಹಾಗೂದಾಖಲಾತಿನಿರ್ವಹಣೆ, ನಿಲಯದಲ್ಲಿ ತರಬೇತಿ ನಂತರದಲ್ಲಿ ಪ್ರಾತ್ಯಕ್ಷಿಕತೆ ಕುರಿತು ಸಂಬಂಧಪಟ್ಟ ಅಧಿಕಾರಿಗಳು, ಸಂಪನ್ಮೂಲ ವ್ಯಕ್ತಿಗಳು ಉಪನ್ಯಾಸ ನೀಡಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಅಂಕಿತ ಅಧಿಕಾರಿ ಡಾ.ಪಾಲಾಕ್ಷಪ್ಪ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಇಂಜಿನಿಯರ್ ಪ್ರಜ್ವಲ್, ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕರಾದ ವಿ.ಕೃಷ್ಣಮೂರ್ತಿ, ದಿನೇಶ್, ಟಿ.ಎನ್.ಮಾಲತಿ, ಕುಮಾರಸ್ವಾಮಿ, ಕಾಳಮ್ಮ, ಮಂಜುನಾಥ್ ಸೇರಿದಂತೆ ವಸತಿ ನಿಲಯಗಳು ಹಾಗೂ ವಸತಿ ಶಾಲೆಗಳ ಸಿಬ್ಬಂದಿಗಳು ಇದ್ದರು.

## ಫಾಸ್ಟ್ ನ್ಯೂಸ್

### ಇಂಡಿಯಾ ಕೂಟ ಗೆದ್ದರೆ ಶೇ.50 ರ ಮೀಸಲು ಮಿತಿ ನಿಯಮ ರದ್ದು: ರಾಹುಲ್

» ರಾಂಚಿ

ಈ ಬಾರಿಯ ಲೋಕಸಭೆ ಚುನಾವಣೆಯಲ್ಲಿ 'ಇಂಡಿಯಾ' ಮೈತ್ರಿಕೂಟವು ಗೆಲುವು ಸಾಧಿಸಿ ಅಧಿಕಾರಕ್ಕೆ ಬಂದರೆ ದೇಶದಲ್ಲಿ ಮೀಸಲಾತಿ ಮೇಲಿನ ಶೇ.50ರಷ್ಟು ಮಿತಿಯನ್ನು ತೆಗೆದು ಹಾಕಲಾಗುವುದು ಎಂದು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಭರವಸೆ ನೀಡಿದ್ದಾರೆ. ಉತ್ತರಾಖಂಡದಲ್ಲಿ ನಡೆಯುತ್ತಿರುವ ಭಾರತ್ ಜೋಡೋ ನ್ಯಾಯ ಯಾತ್ರೆ ವೇಳೆ ಇಲ್ಲಿನ ಶಹೀದ್ ಮೈದಾನದಲ್ಲಿ ಆಯೋಜಿಸಲಾಗಿದ್ದ ಕಾರ್ಯಕ್ರಮದಲ್ಲಿ ಮಾತನಾಡಿದ ರಾಹುಲ್ 'ಈ ಬಾರಿಯ ಚುನಾವಣೆಯಲ್ಲಿ 'ಇಂಡಿಯಾ' ಮೈತ್ರಿಕೂಟ ಅಧಿಕಾರಕ್ಕೆ ಬಂದರೆ ದೇಶದಲ್ಲಿ ಅಸ್ತಿತ್ವದಲ್ಲಿರುವ ಮೀಸಲಾತಿ ಮೇಲಿನ ಶೇ.50ರಷ್ಟು ಮಿತಿಯ ಪ್ರಮಾಣವನ್ನು ತೆಗೆದು ಹಾಕಲಾಗುವುದು' ಎಂದಿದ್ದಾರೆ. ಯಾವುದೇ ವರ್ಗಕ್ಕೆ ಮೀಸಲಾತಿ ನೀಡುವುದಕ್ಕೆ ಮಿತಿ ಇದೆ. ಶೇ.50ಕ್ಕಿಂತ ಹೆಚ್ಚು ಮೀಸಲಾತಿನೀಡುವಂತಿಲ್ಲಎಂದು ಸದ್ಯಕಾನೂನಿದೆ. ಈ ಕಾನೂನನ್ನು ತಿದ್ದುಪಡಿ ಮಾಡುವ ಮೂಲಕ ಮೀಸಲಾತಿಯ ಪ್ರಮಾಣವನ್ನು ಹೆಚ್ಚಿಸಲಾಗುತ್ತದೆ. ಅಂದರೆ ಶೇ.50ಕ್ಕಿಂತ ಹೆಚ್ಚಿನ ಮೀಸಲಾತಿಯನ್ನು 'ಇಂಡಿಯಾ' ಸರ್ಕಾರ ನೀಡುತ್ತದೆ ಎಂದು ಗಾಂಧಿ ಹೇಳಿದ್ದಾರೆ

### ಫೆ.9 ಕ್ಕೆ ಭಗೀರಥ ಮಠದಲ್ಲಿ 25ನೇ ವರ್ಷದ ರಜತ ಮಹೋತ್ಸವ



» ಹೊಸದುರ್ಗ

ತಾಲ್ಲೂಕಿನಬ್ರಹ್ಮವಿದ್ಯಾನಗರಭಗೀರಥಗುರುಪೀಠದ ಪುರುಷೋತ್ತಮಾನಂದ ಪುರಿ ಸ್ವಾಮೀಜಿ ಅವರ ಪಟ್ಟಾಭಿಷೇಕದ ರಜತ ಮಹೋತ್ಸವ ಫೆ. 9 ಹಾಗೂ 10 ರಂದು ಎರಡು ದಿನಗಳ ಕಾಲ ನಡೆಯಲಿದೆ. ' ಫೆ. 9 ರ ಬೆಳ್ಳಿಗ್ಗೆ 10.30 ಕ್ಕೆ ಕಾರ್ಯಕ್ರಮವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಉದ್ಘಾಟಿಸುವರು. ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಸಚಿವರುಗಳಾದ ಸತೀಶ್ ಜಾರಕಿಹೊಳಿ, ಡಿ. ಸುಧಾಕರ್, ಕೆ.ಎನ್. ರಾಜಣ್ಣ, ಶಿವರಾಜ್ ತಂಗಡಗಿ, ಭೈರತಿ ಸುರೇಶ್, ಮಧುಬಂಗಾರಪ್ಪ, ಆರ್.ಬಿ. ತಿಮ್ಮಾಪುರ, ಎನ್.ಎಸ್. ಬೋಸರಾಜು, ನಾಗೇಂದ್ರ, ಶಾಸಕ ಪುಟ್ಟರಂಗಶೆಟ್ಟಿ, ಬಿ.ಜಿ. ಗೋವಿಂದಪ್ಪ ಸೇರಿದಂತೆ ಹಲವು ಜನಪ್ರತಿನಿಧಿಗಳು ಭಾಗವಹಿಸುವರು'. ' ಸಾಲುಮರದ ತಿಮ್ಮಕ್ಕ, ಡಾ. ಕೆ.ಎಸ್. ರವೀಂದ್ರನಾಥ್, ಕುಂಸಿ ಚಂದ್ರಪ್ಪ, ವಿಜಯ್ ಕುಮಾರ್ ತೋರ್ಗಲ್, ಎಸ್.ವಿ. ರಾಜೇಂದ್ರ ಸಿಂಗ್ ಬಾಬು, ಸವಿತ ಮಹತೋ ಅವರಿಗೆ ಭಗೀರಥರತ್ನ ಪ್ರಶಸ್ತಿ ನೀಡುವರು. ಮಧ್ಯಾಹ್ನ 2 ಕ್ಕೆ ವಿವಿಧ ಮಠಾಧೀಶರ ಸಮ್ಮುಖದಲ್ಲಿ ಧಾರ್ಮಿಕ ಕಾರ್ಯಕ್ರಮಗಳು ನಡೆಯಲಿವೆ. ಫೆ. 10 ಕ್ಕೆ ಶ್ರೀಮಠದ ಆವರಣದಲ್ಲಿ ಹೋಮ, ಹವನ, ಪೀಠಾರೋಹಣ, ಧಾರ್ಮಿಕ ಕಾರ್ಯಕ್ರಮಗಳು ನಡೆಯಲಿವೆ. ಉಚಿತ ಆರೋಗ್ಯ ತಪಾಸಣಾ ಶಿಬಿರ, ನಿತ್ಯ ಸಂಜೆ ಸಾಂಸ್ಕೃತಿಕ ಕಾರ್ಯಕ್ರಮಗಳು ಹಾಗೂ ಫೆ. 8 ರಿಂದ 10 ರವರೆಗೆ ನಿರಂತರ ದಾಸೋಹ ನಡೆಯಲಿದೆ ಎಂದು ಭಗೀರಥ ಗುರುಪೀಠದ ಪುರುಷೋತ್ತಮಾನಂದ ಪುರಿ ಸ್ವಾಮೀಜಿ ಮಾಹಿತಿ ನೀಡಿದರು.

## ಸರ್ಕಾರದಿಂದ ರೈತರಿಗೆ ಗುಡ್ ನ್ಯೂಸ್: ಪಹಣಿ ಸಮಸ್ಯೆಗೆ ಮುಕ್ತಿ, ಎಲ್ಲಾ ದಾಖಲೆಗಳು ಡಿಜಿಟಲೀಕರಣ

» ಕೊಡಗು

ಪೈಕಿ ಮತ್ತು ಪಹಣಿ ಕಾಲಂ 3 ಮತ್ತು 9ರಲ್ಲಿ ವ್ಯತ್ಯಾಸವಿರುವ ಪ್ರಕರಣಗಳ ಸಂಖ್ಯೆ ಕೊಡಗಿನಲ್ಲಿ ಅಧಿಕವಾಗಿದ್ದು ದಶಕಗಳ ಕಾಲದಿಂದ ಉಳಿದಿದ್ದ ಈ ಎಲ್ಲಾ ಸಮಸ್ಯೆಗಳಿಗೂ ಮುಕ್ತಿ ಸನ್ನಿಹಿತ ಎಂದು ಸಚಿವ ಕೃಷ್ಣ ಬೈರೇಗೌಡ ಅವರು ಸೂಚಿಸಿದರು. ಎಲ್ಲಾ ದಾಖಲೆಗಳನ್ನು ಡಿಜಿಟಲೀಕರಣ ಮಾಡುತ್ತಿರೋದಾಗಿ ತಿಳಿಸಿದ್ದಾರೆ.

ಕೊಡಗಿನ ಜಿಲ್ಲಾ ಪಂಚಾಯತ್ ಕಚೇರಿಯಲ್ಲಿ ಸೋಮವಾರ ಪ್ರಗತಿ ಪರಿಶೀಲನಾ ಸಭೆ ನಡೆಸಿ ಮಾತನಾಡಿದ ಅವರು, "ಪ್ರಸ್ತುತ ರಾಜ್ಯಾದ್ಯಂತ ಪೈಕಿ ಮತ್ತು ಪಹಣಿ ಕಾಲಂ 3 ಮತ್ತು 9ರಲ್ಲಿ ವ್ಯತ್ಯಾಸವಿರುವ ಪ್ರಕರಣಗಳ ಸಂಖ್ಯೆ ಒಟ್ಟಾರೆ 1,32,618. ಈ ಪೈಕಿ ಕೊಡಗಿನಲ್ಲೇ ಸುಮಾರು 60,000ಕ್ಕೂ ಹೆಚ್ಚಿನ ಪ್ರಕರಣಗಳಿವೆ" ಎಂದು ವಿಷಾಧಿಸಿದರು.ಸಮಸ್ಯೆಯ ಕಾರಣಗಳ ಕುರಿತು ಸಭೆಯಲ್ಲಿ ಚರ್ಚಿಸಿದ ಅವರು, "ಸೋಮವಾರ ಪೇಟೆ ತಾಲೂಕಿನಲ್ಲಿ ಅಧಿಕ ಸಂಖ್ಯೆಯಲ್ಲಿ ಸರ್ಕಾರಿ ಮಂಜೂರು ಭೂಮಿ ಇದ್ದರೆ, ಉಳಿದ ತಾಲೂಕುಗಳಲ್ಲಿ ಜಮಾ ಬಾಣೆ ಭೂಮಿ ಹೆಚ್ಚಿದೆ. ಹೀಗಾಗಿ ಪೈಕಿ ಮತ್ತು ಪಹಣಿ ಕಾಲಂ 3 ಮತ್ತು 9ರಲ್ಲಿ ವ್ಯತ್ಯಾಸವಿರುವ ಪ್ರಕರಣಗಳ ಸಂಖ್ಯೆಯೂ ಅಧಿಕವಾಗಿದೆ.

ಈ ಸಮಸ್ಯೆ ಬಗೆಹರಿಸುವಂತೆ ಅಲ್ಲಿನ ಸ್ಥಳೀಯ ಶಾಸಕರು ಒತ್ತಾಯಿಸುತ್ತಿದ್ದಾರೆ. ಹೀಗಾಗಿ ಕೊಡಗಿನಲ್ಲಿ ವಿಶೇಷ ಆದ್ಯತೆಯ ಮೇಲೆ ಕೆಲಸ ನಿರ್ವಹಿಸುವ ತುರ್ತು ಇದೆ.


ಪುಟ 2


## ಆಕಸ್ಮಿಕ ಬೆಂಕಿ: ಬಾಳೆ ತೋಟ ನಾಶ

» ಪರಶುರಾಂಪುರ

ಹೋಬಳಿಯ ಕ್ಯಾದಿಗುಂಟೆ ಗ್ರಾಮದಲ್ಲಿ ಆಕಸ್ಮಿಕವಾಗಿ ಬೆಂಕಿ ತಗುಲಿದ



ಪರಿಣಾಮ ಸುಮಾರು 1.15 ಲಕ್ಷದ ಬಾಳೆ ತೋಟ ಬೆಂಕಿಗೆ ಆಹುತಿಯಾಗಿದೆ. ಗ್ರಾಮದ ಚಂದ್ರಕಲಾ ಎಂಬುವವರಿಗೆ ಸೇರಿದ ರಿ. ಸರ್ವೆ ನಂ 99ರಲ್ಲಿ 2.23 ಎಕರೆ ಪ್ರದೇಶದಲ್ಲಿ ಬಾಳೆ ಬೆಳೆದಿದ್ದು, ಕೆಲವೇ ದಿನಗಳಲ್ಲಿ ಬಾಳೆ ಫಸಲು ನಿರೀಕ್ಷೆಯಲ್ಲಿದ್ದ ರೈತರಿಗೆ ಅಪಾರ ನಷ್ಟವಾಗಿದೆ. ಆಕಸ್ಮಿಕವಾಗಿ ಬಿದ್ದ ಬೆಂಕಿಗೆ ಬಾಳೆತೋಟ ಸಂಪೂರ್ಣ ಸುಟ್ಟುಹೋಗಿದೆ. ಘಟನೆ ನಡೆದ ಸ್ಥಳಕ್ಕೆ ಕಂದಾಯ ಇಲಾಖೆ ಅಧಿಕಾರಿ ಸಿದ್ದರಾಮ ಶೆಟ್ಟಿ ಭೇಟಿ ನೀಡಿ ಪರಿಶೀಲನೆ ನಡೆಸಿದರು.

## ಪ್ರಮುಖ ಸುದ್ದಿ

### ಹೋಬಳಿ ಮಟ್ಟದ ನೀರಾವರಿ ಅನುಷ್ಠಾನ ಹೋರಾಟ ಸಮಿತಿ ಸಭೆಯಲ್ಲಿ ನಿರ್ಣಯ

# ಫೆಬ್ರವರಿ 13 ರಂದು ನಾಯಕನಹಟ್ಟಿ ಬಂದ್ ಕರೆ

» ನಾಯಕನಹಟ್ಟಿ

ಭದ್ರಾ ಮೇಲ್ದಂಡೆ ಕಾಮಗಾರಿ ಶೀಘ್ರ ಪೂರ್ಣಗೊಳಿಸುವಂತೆ ಆಗ್ರಹಿಸಿ ನೀರಾವರಿ ಅನುಷ್ಠಾನ ಹೋರಾಟ ಸಮಿತಿಯು ಫೆಬ್ರವಹಿ 13ರ ಮಂಗಳವಾರ ನಾಯಕಹನಟ್ಟಿ ಬಂದ್ ಗೆ ಕರೆ ನೀಡಿದೆ.

ಹಟ್ಟಿ ಮಲ್ಲಪ್ಪನಾಯಕ ಸಂಘದ ಆಡಳಿತ ಕಚೇರಿಯಲ್ಲಿ ಮಂಗಳವಾರ ನಡೆದ ನೀರಾವರಿ ಅನುಷ್ಠಾನ ಹೋರಾಟ ಸಮಿತಿಯ ಹೋಬಳಿ ಮಟ್ಟದ ಸಭೆಯಲ್ಲಿ ಈ ನಿರ್ಣಯ ಕೈಗೊಳ್ಳಲಾಯಿತು. ಸ್ವಯಂ ಪ್ರೇರಿತ ಬಂದ್ ಆಚರಿಸುವುದರ ಮೂಲಕ ಕೇಂದ್ರ ಹಾಗೂ ರಾಜ್ಯ ಸರ್ಕಾರದ ಗಮನ ಸೆಳೆಯಲು ತೀರ್ಮಾನಿಸಲಾಯಿತು.

ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಸಮಿತಿಯ ಹೋಬಳಿ ಅಧ್ಯಕ್ಷ ಜಿ.ಬಿ.ಮುದಿಯಪ್ಪ, ದೇಶಕ್ಕಾಗಿ ನಾಯಕನಹಟ್ಟಿ ಹೋಬಳಿ ಜನ ಅಪಾರ ಪ್ರಮಾಣದಲ್ಲಿ ತ್ಯಾಗ ಮಾಡಿದ್ದಾರೆ. ಡಿಆರ್ ಡಿಓ ಸೇರಿದಂತೆ ಹಲವು ವೈಜ್ಞಾನಿಕ ಸಂಸ್ಥೆಗಳಿಗೆ 13 ಸಾವಿರ ಎಕರೆ ಭೂಮಿ ಬಿಟ್ಟುಕೊಟ್ಟು ಕೊಟ್ಟಿದ್ದಾರೆ. ಇಂತಹ ತ್ಯಾಗಿಗಳ ಬದುಕು ಹಸನಾಗಿಸುವುದು



ಕೇಂದ್ರ ಹಾಗೂ ರಾಜ್ಯ ಸರ್ಕಾರದ ಕರ್ತವ್ಯ. ಭದ್ರಾ ಮೇಲ್ದಂಡೆ ಯೋಜನೆಯಡಿ ಚಳ್ಳಕೆರೆ ತಾಲೂಕಿನ ಎಲ್ಲ ಕೆರೆಗಳ ಶೀಘ್ರ ತುಂಬಿಸಿ ಈ ಭಾಗದ ರೈತರಿಗೆ ಅನುಕೂಲ ಮಾಡಿಕೊಡಬೇಕೆಂದು ಆಗ್ರಹಿಸಿದರು.

ಭದ್ರಾ ಮೇಲ್ದಂಡೆ ಯೋಜನೆ ನಿಧಾನಗತಿಯಲ್ಲಿ ಸಾಗಿದೆ. ಚಳ್ಳಕೆರೆ, ಮೊಳಕಾಲ್ಮುರು, ಜಗಳೂರು ತಾಲೂಕುಗಳ ಕಡೆಗಣನೆ ಮಾಡಲಾಗಿದೆ. ಈ ಭಾಗದ ಜನರ ತಾಳ್ಮೆ ಪರೀಕ್ಷೆ ಮಾಡಲು ಸರ್ಕಾರ ಮುಂದಾಗಬಾರದು. ಕಾಲಮಿತಿಯಲ್ಲಿ ಭದ್ರಾ ಮೇಲ್ದಂಡೆ ಕಾಮಗಾರಿ ಪೂರ್ಣಗೊಳಿಸಿ ಕೆರೆಗಳ ತುಂಬಿಸಬೇಕು. ಈ ಭಾಗದಲ್ಲಿಯೂ ಡ್ರಿಪ್ ಇರಿಗೇಷನ್ ಪ್ರಾಜೆಕ್ಟ್ ಜಾರಿ ಮಾಡಬೇಕೆಂದು ಒತ್ತಾಯಿಸಿದರು.

ಚಿಂತಕ ಜಗಳೂರು ಯಾದವರೆಡ್ಡಿ ಮಾತನಾಡಿ, ಭದ್ರಾ ಮೇಲ್ದಂಡೆ ಕಾಮಗಾರಿ ಶೀಘ್ರ ಮುಗಿಸುವ ಇರಾದೆ ರಾಜ್ಯ ಹಾಗೂ ಕೇಂದ್ರ ಸರ್ಕಾರಕ್ಕೆ ಇದ್ದಂತಿಲ್ಲ. ಜನರ ಭಾವನೆಗಳಜೊತೆಯಾವುದೇಸರ್ಕಾರಗಳು ಚೆಲ್ಲಾಟವಾಡಬಾರದು.ಭದ್ರಾದ ನಂತರ ಕೈಗೆತ್ತಿಕೊಳ್ಳಲಾದ ಎತ್ತಿನಹೊಳೆ ಯೋಜನೆಗೆ 12 ಸಾವಿರ ಕೋಟಿ ರುಪಾಯಿ ವ್ಯಯ ಮಾಡಿರುವ ರಾಜ್ಯ ಸರ್ಕಾರ ಭದ್ರಾ ಮೇಲ್ದಂಡೆ ವಿಚಾರದಲ್ಲಿ ಮಲತಾಯಿ ಧೋರಣೆ ಅನುಸರಿಸುತ್ತಿದೆ. ಸರ್ಕಾರವ ಎಚ್ಚರಿಸಲು ಹೋರಾಟವೊಂದೇ ಅನಿವಾರ್ಯ. ನಿರ್ಣಾಯಕ ಹೋರಾಟದ ಮೂಲಕ ಬಹುದಿನಗಳ ಕನಸನ್ನು ಈಡೇರಿಸಿಕೊಳ್ಳಲು ಎಲ್ಲರೂ ಮುಂದಾಗಬೇಕೆಂದರು.

ನೀರಾವರಿ ಅನುಷ್ಠಾನ ಹೋರಾಟ ಸಮಿತಿ ಸಂಚಾಲಕ ಚಿಕ್ಕಪ್ಪನಹಳ್ಳಿ ಷಣ್ಮುಖ ಮಾತನಾಡಿ ಇದು ಪಕ್ಷಾತೀತ ಹೋರಾಟವಾಗಿದ್ದು ಜನರ ಬದುಕು ಪ್ರಧಾನವಾಗಿರಿಸಿಕೊಂಡು ಮುನ್ನಡೆಯಲಾಗುತ್ತಿದೆ. ಯಾವುದೇ ಪಕ್ಷದ ವಿರುದ್ಧ ನಮ್ಮ ಹೋರಾಟವಲ್ಲ. ಭದ್ರಾ ಮೇಲ್ದಂಡೆ ಕಾಮಗಾರಿ ಶೀಘ್ರ ಪೂರ್ಣಗೊಳಿಸಿ ಎನ್ನುವುದು ನಮ್ಮ ಹಕ್ಕೊತ್ತಾಯ. ಕೇಂದ್ರ ಸರ್ಕಾರದ ಅನುದಾನ ಕೊಡುತ್ತದೆ ಎಂದು ರಾಜ್ಯ ಸರ್ಕಾರ ಕಾಯವುದು, ರಾಜ್ಯ ಮೊದಲು ಖರ್ಚು ಮಾಡಲಿ ಎಂದು ಕೇಂದ್ರ ಉದಾಸೀನ ತೋರುವುದು ತರವಲ್ಲದ ನಡವಳಿಕೆಯಾಗಿದೆ. ಅನುದಾನ ಎಲ್ಲಿಂದ ತರುತ್ತಾರೋ ನಮಗದು ಬೇಕಾಗಿಲ್ಲ. ಆಧ್ಯತೆ ಮೇರೆಗೆ ಕಾಮಗಾರಿ ಪೂರ್ಣಗೊಳಿಸಿ ಎಂಬುದು ನಮ್ಮ ಬೇಡಿಕೆ ಎಂದರು.

ಭದ್ರಾ ಕಾಮಗಾರಿಗೆ ಹಣ ಒದಗಿಸುವಂತೆ ಆಗ್ರಹಿಸಿ ಈಗಾಗಲೇ ಚಿತ್ರದುರ್ಗ ಬಂದ್ ನಡೆದಿದೆ.


ಪುಟ 2

ನಮ್ಮ ಜನ
NAMMA JANA





## ಫಾಸ್ಟ್ ನ್ಯೂಸ್

### 7, 10 ರಂದು ಸಮಾವೇಶ

» ಚಿತ್ರದುರ್ಗ

ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಗಳ ಸಮರ್ಪಕ ಅನುಷ್ಠಾನದ ಕುರಿತು ತಾಲ್ಲೂಕು ಮತ್ತು ಹೋಬಳಿಮಟ್ಟದ ಸಮಾವೇಶವನ್ನು ಇದೇ ಫೆ.7ರಂದು ಬೆಳಿಗ್ಗೆ 11ಕ್ಕೆ ಹಿರಿಯೂರು ತಾಲ್ಲೂಕಿನ ಐಮಂಗಲ ಗ್ರಾಮದ ಶ್ರೀ ಬೋರಯ್ಯ ಪ್ರಥಮ ದರ್ಜೆ ಕಾಲೇಜು ಆವರಣ ಹಾಗೂ ಫೆ.10ರಂದು ಬೆಳಿಗ್ಗೆ 11ಕ್ಕೆ ಹಿರಿಯೂರು ನೆಹರು ಕ್ರೀಡಾಂಗಣ (ಹಳೆ ಕಡ್ಲೆಕಾಯಿ ಮಂಡಿ)ಯಲ್ಲಿ ಹಮ್ಮಿಕೊಳ್ಳಲಾಗಿದೆ.ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಹಿರಿಯೂರು ಶಾಸಕ ಡಿ.ಸುಧಾಕರ್ ಅವರ ಅಧ್ಯಕ್ಷತೆಯಲ್ಲಿ ಸಮಾವೇಶ ನಡೆಯಲಿದ್ದು, ಗ್ಯಾರಂಟಿ ಯೋಜನೆಗಳಾದ ಗೃಹಲಕ್ಷ್ಮೀ, ಗೃಹಜ್ಯೋತಿ, ಅನ್ನಭಾಗ್ಯ, ಶಕ್ತಿ ಹಾಊ ಯುವನಿಧಿ ಯೋಜನೆಗಳ ಸಮರ್ಪಕ ಅನುಷ್ಠಾನದ ಕುರಿತು ಸಮಾವೇಶ ಏರ್ಪಡಿಸಲಾಗಿದೆ. ಈ ಕಾರ್ಯಕ್ರಮದಲ್ಲಿ ಗ್ಯಾರಂಟಿ ಯೋಜನೆಗಳ ಫಲಾನುಭವಿಗಳು ಹಾಗೂ ಎಲ್ಲಾ ಸಾರ್ವಜನಿಕರು ಭಾಗವಹಿಸಿ ಕಾರ್ಯಕ್ರಮದ ಸದುಪಯೋಗಪಡಿಸಿಕೊಳ್ಳಬೇಕು. ಯಾವುದೇ ಯೋಜನೆಯ ಫಲಾನುಭವಿಗಳಿಗೆ ಅನುಷ್ಠಾನದಲ್ಲಿ ನ್ಯೂನ್ಯತೆ ಉಂಟಾಗಿದ್ದಲ್ಲಿ ಬಗೆಹರಿಸಿಕೊಳ್ಳಲು ವ್ಯವಸ್ಥೆ ಮಾಡಲಾಗಿದೆ ಎಂದಿದ್ದಾರೆ.

### ಫೆಬ್ರವರಿ 13 ರಂದು ನಾಯಕನಹಟ್ಟಿ ಬಂದ್

» ಮೊದಲ ಪುಟದಿಂದ

ಫೆಬ್ರವರಿ 9 ರಂದು ಚಳ್ಳಕೆರೆ ಬಂದ್ ಕರೆಯಲಾಗಿದೆ. ಜಿಲ್ಲಾ ಪಂಚಾಯಿತಿ ಮುಂಭಾಗ ರೈತ ಸಂಘ ಅನಿರ್ಧಿಷ್ಟಾವಧಿ ಧರಣಿ ಆರಂಭಿಸಿದೆ. ಚಿತ್ರದುರ್ಗದ ನೆಲದಲ್ಲಿ ಹೆಚ್ಚು ಹೋರಾಟಗಳು ದಾಖಲಾಗುವುದರ ಮೂಲಕ ಬಹುದಿನಗಳ ನೀರಾವರಿ ಕನಸು ಸಾಕಾರಗೊಳಿಸಿಕೊಳ್ಳಬೇಕಿದೆ. ಇದಕ್ಕಾಗಿ ಸಂಘಟಿತ ಪ್ರಯತ್ನ ಅಗತ್ಯವೆಂದರು. ಫೆಬ್ರವರಿ 13 ರಂದು ಸ್ವಯಂ ಪ್ರೇರಿತ ನಾಯಕನಹಟ್ಟಿ ಬಂದ್ ಕೈಗೊಳ್ಳುವ ತೀರ್ಮಾನ ಕೈಗೊಳ್ಳಲಾಯಿತು. ನೀರಾವರಿ ಅನುಷ್ಠಾನ ಹೋರಾಟ ಸಮಿತಿಯ ಹೋಬಳಿ ಉಪಾಧ್ಯಕ್ಷ ಮಹಾಂತೇಶ್ ದೇವರಹಳ್ಳಿ, ಆರ್ ಬಸಪ್ಪ, ಗುಂತಕೋಲಮ್ಮನಹಳ್ಳಿ ಚಂದ್ರಣ್ಣ, ಕಾರ್ಯಧ್ಯಕ್ಷ ಎಸ್. ಟಿ ಬೋರ್ ಸ್ವಾಮಿ, ಗೌಡಗೆರೆ ಟಿ ರಂಗಪ್ಪ, ಚೇರ್ಮನ್ ತಿಪ್ಪೇಸ್ವಾಮಿ, ಏಜೆಂಟ್ರು ಪಾಲಯ್ಯ, ರೇಖಲಗೆರೆ ವೀರೇಶ್, ಅಶೋಕ್, ಅಬ್ಬೇನಹಳ್ಳಿ ಎಂ ಎಸ್ ಶಿವಪ್ರಕಾಶ್, ಕೆ.ಟಿ ನಾಗರಾಜ್ ಮಲ್ಲೂರಹಳ್ಳಿ, ತೊರೆಕೋಲಮ್ಮನಹಳ್ಳಿ, ಮಂಜಣ್ಣ, ರಾಮಸಾಗರ ಪಿ.ಪಿ ಮಹಾಂತೇಶ್ ನಾಯಕ, ಸಭೆಯಲ್ಲಿ ಪಾಲ್ಗೊಂಡಿದ್ದರು.

### 9ರಂದು ತರಬೇತಿ

» ಚಿತ್ರದುರ್ಗ

ಹಿರಿಯೂರು ತಾಲ್ಲೂಕಿನ ಬಬ್ಬೂರು ಫಾರಂನ ಜಿಲ್ಲಾ ಕೃಷಿ ತರಬೇತಿ ಕೇಂದ್ರದಲ್ಲಿ ಇದೇ ಫೆ.9ರಂದು ಬೆಳಗ್ಗೆ 10.30ಕ್ಕೆ ಜಿಲ್ಲೆಯ ಹಿರಿಯೂರು ತಾಲ್ಲೂಕಿನ ಐಮಂಗಲ ಹೋಬಳಿ ಮತ್ತು ಕಸಬಾ, ಹಿರಿಯೂರಿನ ರೈತರಿಗೆ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಯಡಿ ಸೂಕ್ಷ್ಮ ಮತ್ತು ತುಂತುರ ನೀರಾವರಿ ಘಟಕಗಳ ಉಪಯೋಗ ಮತ್ತು ನಿರ್ವಹಣೆ ಕುರಿತು ಒಂದು ದಿನದ ತರಬೇತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ತರಬೇತಿ ಕಾರ್ಯಕ್ರಮದಲ್ಲಿ ವಿಜಯ್‌ಕುಮಾರ್, ಎಜಿಎಂ., ಪ್ರೀಮೀಯರ್ ಇರಿಗೇಷನ್ ಕಂ. ಲಿ., ಬೆಂಗಳೂರು ಇವರು ನೀರಿನ ಸಮರ್ಥ ಬಳಕೆ, ಹನಿ ನೀರಾವರಿ ಮತ್ತು ಸ್ಪ್ರೀಂಕ್ಲರ್ ಘಟಕಗಳ ಉಪಯೋಗ ಮತ್ತು ಅವುಗಳ ನಿರ್ವಹಣೆಯ ಕುರಿತು ವಿಷಯ ಮಂಡನೆ ಮತ್ತು ಪ್ರಾತ್ಯಕ್ಷಿಕೆ ನೀಡುವರು. ಹಿರಿಯೂರು ತಾಲ್ಲೂಕಿನ ಐಮಂಗಲ ಹೋಬಳಿ ಮತ್ತು ಕಸಬಾ ಹೋಬಳಿ ಹಿರಿಯೂರಿನ ಆಸಕ್ತ 60 ಜನ ರೈತಭಾಂದವರು ಈ ತರಬೇತಿಯಲ್ಲಿ ಭಾಗವಹಿಸಲು ರಜನೀಕಾಂತ. ಆರ್ ಸಹಾಯಕ ಕೃಷಿ ನಿರ್ದೇಶಕರು, ಜಿಲ್ಲಾ ಕೃಷಿ ತರಬೇತಿಕೇಂದ್ರ, ಬಬ್ಬೂರು ಫಾರಂ (8277931058), ಎಂ.ಉಷಾರಾಣಿ, ಸಹಾಯಕ ಕೃಷಿ ನಿರ್ದೇಶಕರು (ರೈ.ಮ) 9980730696, ಟಿ.ಪಿ.ರಂಜಿತಾ, ಕೃಷಿ ಅಧಿಕಾರಿ (8277930959), ಸಿಕಂದರ್ ಬಾಷಾ, ಕೃಷಿ ಅಧಿಕಾರಿ (8277931058) ಮತ್ತು ಪವಿತ್ರಾ ಎಂ. ಜೆ. (9535412286) ಅವರ ದೂರವಾಣಿ ಸಂಖ್ಯೆಗೆ ಕರೆ ಮಾಡಿ ನೋಂದಾಯಿಸಿ ತರಬೇತಿಯ ಸದುಪಯೋಗ ಪಡೆದುಕೊಳ್ಳಲು ಕೋರಿದೆ. ಮೊದಲು ನೋಂದಾವಣಿ ಮಾಡಿಕೊಂಡ 60 ಜನ ರೈತ ಭಾಂದವರಿಗೆ ಆದ್ಯತೆ ಮೇರೆಗೆ ತರಬೇತಿಗೆ ಪರಿಗಣಿಸಲಾಗುವುದು ಎಂದು ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಸಹಾಯಕ ನಿರ್ದೇಶಕ ಆರ್.ರಜನೀಕಾಂತ ತಿಳಿಸಿದ್ದಾರೆ.

### ರೈತರಿಗೆ ಗುಡ್ ನ್ಯೂಸ್: ಪಹಣಿ ಸಮಸ್ಯೆಗೆ ಮುಕ್ತಿ, ಎಲ್ಲಾ ದಾಖಲೆಗಳು ಡಿಜಿಟಲೀಕರಣ

» ಮೊದಲ ಪುಟದಿಂದ

ಸಂಬಂಧಿತ ಕಂದಾಯ ಮತ್ತು ಸರ್ವೆ ಇಲಾಖೆ ಹಿರಿಯ ಅಧಿಕಾರಿಗಳು ಈಗಲೇ ಕೊಡಗಿಗೆ ತೆರಳಿ ಸರ್ವೆ ತಯಾರಿ ಕೆಲಸ ಆರಂಭಿಸಬೇಕು. ಲೈಸೆನ್ಸ್ ಸರ್ವೆಯರ್ ಗಳ ಸಹಾಯ ಪಡೆದುಕೊಳ್ಳಿ. ಗ್ರಾಮ ಲೆಕ್ಕಿಗರಿಗೂ ಸರ್ವೆ ತರಬೇತಿ ನೀಡಿ. ಈ ಕೆಲಸಕ್ಕೆ ಹೊಸ ತಂತ್ರಜ್ಞಾನ ಮತ್ತು ಉಪಕರಣಗಳನ್ನು ಬಳಸಿಕೊಳ್ಳಿ. ಕಂದಾಯ ಇಲಾಖೆ ಅಧಿಕಾರಿಗಳು ತಮ್ಮನ್ನು ಸಂಪೂರ್ಣ ತೊಡಗಿಸಿಕೊಂಡು ಸರ್ವೆ ಕೆಲಸವನ್ನು ಮುಂದಿನ 60 ದಿನಗಳಲ್ಲಿ ಪೂರೈಸಬೇಕು. ಕಂದಾಯ ಅಧಿಕಾರಿಗಳು ಹಾಗೂ ಜಿಲ್ಲಾಧಿಕಾರಿಗಳು ಪ್ರತಿ 15 ದಿನಗಳಿಗೊಮ್ಮೆ ಸಭೆ ನಡೆಸಿ ಚರ್ಚಿಸಬೇಕು" ಎಂದರು.

---

ಎರೆಹುಳು ಗೊಬ್ಬರ ಉತ್ಪಾದನಾ ತಾಂತ್ರಿಕತೆ ಕುರಿತು ತರಬೇತಿಯಲ್ಲಿ ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಸಹಾಯಕ ನಿರ್ದೇಶಕ ಆರ್.ರಜನೀಕಾಂತ್

# ಕೃಷಿಕರ ಕಪ್ಪು ಚಿನ್ನ ಎರೆಹುಳು ಗೊಬ್ಬರ

» ಚಿತ್ರದುರ್ಗ

ಕೃಷಿಕರ ಕಪ್ಪು ಚಿನ್ನ ಎರೆಹುಳು ಗೊಬ್ಬರ ಉಪಯೋಗದಿಂದ ಮಣ್ಣಿನ ಫಲವತ್ತತೆ ಹಾಗೂ ಗುಣಧರ್ಮ ಉತ್ತಮವಾಗಿರುತ್ತದೆ ಎಂದು ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಸಹಾಯಕ ಕೃಷಿ ನಿರ್ದೇಶಕ ಆರ್. ರಜನೀಕಾಂತ ಹೇಳಿದರು.

ಹಿರಿಯೂರು ತಾಲ್ಲೂಕಿನ ಬಬ್ಬೂರು ಫಾರಂನ ಜಿಲ್ಲಾ ಕೃಷಿ ತರಬೇತಿ ಕೇಂದ್ರದಲ್ಲಿ ಈಚೆಗೆ ಜಿಲ್ಲೆಯ ರೈತರಿಗೆ "ಎರೆಹುಳು ಗೊಬ್ಬರ ಉತ್ಪಾದನಾ ತಾಂತ್ರಿಕತೆ" ಕುರಿತು ಹಮ್ಮಿಕೊಂಡಿದ್ದ ಒಂದು ದಿನದ ತರಬೇತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಎರೆಹುಳುವಿನ ಪಾತ್ರ ಕೃಷಿಯಲ್ಲಿ ಅಪಾರವಾದದ್ದು ಅಲ್ಲದೆ ಲಾಭದಾಯಕವಾದುದು ಎಂಬುದು ಎಲ್ಲರಿಗೂ ತಿಳಿದ ವಿಷಯ. ಎರೆಹುಳುವನ್ನು ಭೂಮಿ ಕರುಳು, ರೈತ ಬಂಧು, ರೈತ ಮಿತ್ರ, ಮತ್ತು ನಿಸರ್ಗದ ನೇಗಿಲು ಎಂದು ಕರೆಯುತ್ತಾರೆ. ಎರೆಹುಳು ಭೂಮಿಯ ಮೇಲಿನ ಕಸ, ಕಡ್ಡಿ ಎಲೆ ಮತ್ತು ಇತರ ಪದಾರ್ಥಗಳನ್ನು ಬಳಸಿ ಹಿಕ್ಕೆಯನ್ನು ಹೊರಹಾಕುತ್ತದೆ. ಇದನ್ನು ವರ್ಮಿಕಾಂಪೋಸ್ಟ್ ಅಥವಾ ಎರೆಗೊಬ್ಬರ ಎಂದು ಕರೆಯುತ್ತಾರೆ. ಈ ಎರೆಗೊಬ್ಬರದ ಗುಣಮಟ್ಟ ನಾವು ಬಳಸುವ ಕಚ್ಚಾವಸ್ತುವಿನ ಮೇಲೆ ಅವಲಂಬಿಸಿರುತ್ತದೆ ಎಂದರು.

ಎರೆಗೊಬ್ಬರದಲ್ಲಿ ಸಾವಯವ ಅಂಶ ಹೆಚ್ಚಾಗಿರುವುದರಿಂದ ಮಣ್ಣಿನ ಫಲವತ್ತತೆಯನ್ನು ಹೆಚ್ಚಿಸುತ್ತದೆ. ಸಸ್ಯ ಪ್ರಚೋದಕಗಳು ಇರುವುದರಿಂದ ಸಸ್ಯಗಳ ಬೆಳವಣಿಗೆ ಉತ್ತಮಗೊಳ್ಳುತ್ತದೆ. ಮಣ್ಣಿನಲ್ಲಿ ನೀರು ಹಿಡಿದಿಡುವ ಶಕ್ತಿಯನ್ನು ಹೆಚ್ಚಿಸುತ್ತದೆ. ಎರೆಗೊಬ್ಬರ



ಮಣ್ಣಿನ ಭೌತಿಕ ಹಾಗೂ ರಾಸಾಯನಿಕ ಗುಣಗಳನ್ನು ಉತ್ತಮಪಡಿಸುತ್ತದೆ. ಎರೆಗೊಬ್ಬರದ ಬಳಕೆಯಿಂದ ಮಣ್ಣಿನಲ್ಲಿ ಸೂಕ್ಷ್ಮಜೀವಾಣುಗಳ ಚಟುವಟಿಕೆ ಹೆಚ್ಚುತ್ತದೆ. ಮಣ್ಣಿನಕೊಚ್ಚಣೆಯನ್ನು ಮತ್ತು ನೀರಿನ ಹರಿಯುವಿಕೆಯನ್ನು ಕಡಿಮೆ ಮಾಡುತ್ತದೆ ಎಂದರು.ಹಿರಿಯೂರು ತಾಲ್ಲೂಕಿನ ಗುಳಗೊಂಡನಹಳ್ಳಿ ಗ್ರಾಮದ ಎರೆಹುಳು ಗೊಬ್ಬರ ಉತ್ಪಾದನಾ ಪ್ರಗತಿಪರ ಕೃಷಿಕ ನಾಗರಾಜಪ್ಪ ಮಾತನಾಡಿ, ಸಾವಯವ ಗ್ರಾಮ ಯೋಜನೆಯಡಿ ಹತ್ತು ವರ್ಷದ ಹಿಂದೆ ಕೃಷಿ ಇಲಾಖೆಯಿಂದ ತರಬೇತಿ ಪಡೆದು ಸಹಾಯಧನದಡಿ ನಿರ್ಮಿಸಿಕೊಂಡು ಕ್ರಮೇಣ 7 ಘಟಕಗಳನ್ನು ನಿರ್ಮಿಸಿಕೊಂಡ ತಮ್ಮ ಎರೆಹುಳು ಘಟಕದಿಂದ ಪ್ರತಿ ವರ್ಷವೂ ಎರೆಹುಳು ಮತ್ತು ಎರೆಗೊಬ್ಬರವನ್ನು ಮಾರಾಟ ಮಾಡಿ ರೂ.5 ರಿಂದ 6 ಲಕ್ಷ ಲಾಭ ಗಳಿಸಿ ಆರ್ಥಿಕವಾಗಿ ಸಧೃಡನಾಗಲು ಸಹಕರಿಯಾಗಿದೆಂದರು.

ಪ್ರಸಕ್ತ ಮಳೆ ಕಡಿಮೆಯಾದರು ಎರೆಗೊಬ್ಬರ ಬಳಕೆಯಿಂದ 1 ಎಕರೆಗೆ 20 ಕ್ವಿಂಟಾಲ್ ಮುಸುಕಿನಜೋಳ ಬೆಳೆದಿರುವುದಾಗಿ ತಿಳಿಸುತ್ತಾ ಎರೆಗೊಬ್ಬರ ತಯಾರಿಸುವ ವಿಧಾನವನ್ನು ಹಾಜರಿದ್ದ ರೈತರಿಗೆ ಮನವರಿಕೆ ಮಾಡಿದರು. ಉತ್ತಮ ಎರೆಹುಳು, ಎರೆಗೊಬ್ಬರ ಖರೀದಿ ಹಾಗೂ ಎರೆಹುಳು ಗೊಬ್ಬರದ ತಾಂತ್ರಿಕತೆ ತಿಳಿಯಲು ಆಸಕ್ತ ರೈತರು ನಾಗರಾಜಪ್ಪ ಇವರ ದೂರವಾಣಿ ಸಂಖ್ಯೆಗೆ 9964649212 ಕರೆ ಮಾಡಬಹುದು.

ಈಹಿಂದೆಗುಳಗೊಂಡನಹಳ್ಳಿಗ್ರಾಮದಲ್ಲಿ ಸಾವಯವ ಗ್ರಾಮ ಯೋಜನೆಯಡಿ ಕೃಷಿ ಇಲಾಖೆಯಿಂದ ಸಾವಯವ ಕೃಷಿಯನ್ನು ಉತ್ತೇಜಿಸಲು ಕೈಗೊಂಡಕ್ರಮ, ಸಾವಯವ ಕೃಷಿಯ ಅಗತ್ಯತೆ ಮತ್ತು ಮಹತ್ವದ ಕುರಿತು ಲೋಕೇಶ್‌ರವರು ತಮ್ಮ ಅನುಭವಗಳನ್ನು ಹಂಚಿಕೊಂಡರು.

ಬಬ್ಬೂರು ಕೃಷಿ ವಿಜ್ಞಾನ ಕೇಂದ್ರದ ಕೀಟಶಾಸ್ತ್ರಜ್ಞ ಡಾ.ರುದ್ರಮುನಿ ಮಾತನಾಡಿ, ಎರೆಹುಳುಗಳು ಮೃದು ಶರೀರದ ಪ್ರಾಣಿಗಳಾಗಿದ್ದು, ಅವುಗಳ ಶರೀರದಲ್ಲಿ ಪಿಷ್ಟದ ಅಂಶ ಹೆಚ್ಚಾಗಿರುವ ಕಾರಣ ಅವುಗಳಿಗೆ ಶತ್ರುಗಳ ಬಾಧೆ ಅತಿಯಾಗಿರುವುದು.

ಈ ಕಾರಣದಿಂದಾಗಿ ಸುಲಭವಾಗಿ ದೊರಕುವಂತಹವಸ್ತುಗಳಾದಕಲ್ಲಿನಚಪ್ಪಡಿ, ಇಟ್ಟಿಗೆ, ಸಿಮೆಂಟ್ ಮೊದಲಾದವುಗಳನ್ನು ಬಳಸಿಕೊಂಡು ತೊಟ್ಟಿಗಳನ್ನು ಕಟ್ಟಿದರೆ ಒಳಿತು. ಈ ತೊಟ್ಟಿಗಳ ಉದ್ದ ಅನುಕೂಲಕ್ಕೆ ತಕ್ಕವಾಗಿರಬಹುದು.

ಅಗಲ ಮೂರರಿಂದ ನಾಲ್ಕು ಅಡಿ ಮತ್ತು ಎತ್ತರ (ಆಳ) ಮೂರು ಅಡಿಗಿಂತ ಹೆಚ್ಚಿರಬಾರದು.

ತೊಟ್ಟಿಗಳುಭೂಮಿಯಮೇಲಿದ್ದಲ್ಲಿಕೆಲಸ ಮಾಡುವವರಿಗೆ ಅನುಕೂಲವಾಗುವುದು ಕಸದಲ್ಲಿ ಗಾಳಿಯಾಡುವುದಕ್ಕೂ ಮತ್ತು ತೇವಾಂಶವನ್ನು ಸರಿಯಾಗಿ ಕಾಪಾಡಿಕೊಳ್ಳುವುದಕ್ಕೂ ಇಂತಹ ತೊಟ್ಟಿಗಳ ಬಳಕೆ ಒಳ್ಳೆಯದು. ಒಂದು ಕೆ.ಜಿ. ಹುಳುಗಳು ಒಂದು ದಿನಕ್ಕೆ ಸುಮಾರು 4 ಕೆ.ಜಿ. ಸಾವಯವ ಪದಾರ್ಥವನು ತಿನ್ನುತ್ತವೆ. ಅಂದರೆ 150 ಕೆ.ಜಿಯಷ್ಟು ಗೊಬ್ಬರ ದೊರೆಯುತ್ತದೆ. ಕೃಷಿ ತ್ಯಾಜ್ಯ ಪೂರ್ತಿಯಾಗಿ ಎರೆಗೊಬ್ಬರವಾಗಿ ಪರಿವರ್ತನೆಯಾದ ಮೇಲೆ ಅದನ್ನು ನೆಲದ ಮೇಲೆ ಹಾಕಿ ಗೋಪುರದ ಆಕಾರದಲ್ಲಿ ಹಿಕ್ಕೆಗಳನ್ನು ಹಾಕಬೇಕು. ಈ ರೀತಿ ಗೋಪುರಗಳನ್ನು ಒಂದುರಾತ್ರಿ ಬಿಟ್ಟಲ್ಲಿ ಹುಳುಗಳೆಲ್ಲವೂ ತಳಕ್ಕೆ ಹೋಗಿ ಸೇರುವವು. ಅನಂತರ ಬೇರ್ಪಡಿಸಿದ ಹುಳುಗಳನ್ನು ಹೊಸದಾಗಿ ತಯಾರಿಸಿದ ಮಿಶ್ರಣದಲ್ಲಿ ಬಿಡಬೇಕು. ಎರೆಗೊಬ್ಬರವನ್ನು ನೆರಳಿನಲ್ಲಿ ಒಣಗಿಸಿದ ಮೇಲೆ 3 ಮಿ.ಮೀ. ರಂದ್ರವಿರುವ ಜರಡಿಯಿಂದ ಬೇರ್ಪಡಿಸಬೇಕೆಂದರು.

ತದನಂತರ ರೈತರೊಂದಿಗೆ ಕೃಷಿ ವಿಜ್ಞಾನ ಕೇಂದ್ರದ ಎರೆಹುಳು ಪ್ರಾತ್ಯಕ್ಷಿಕೆ ಘಟಕಕ್ಕೆ ಭೇಟಿ ನೀಡಿ ಎರೆಗೊಬ್ಬರ ತಯಾರಿಸುವ ವಿಧಾನ ಮತ್ತು ಮುಂಜಾಗೃತೆ ಕ್ರಮಗಳನ್ನು ವಿವರಿಸಿದರು. ಎರೆಹುಳು ಸಾಕುವ ತೊಟ್ಟಿಯಲ್ಲಿ ನೀರಿನಂಶ ಶೇ. 40–50ರವರೆಗೆ ಇರುವಂತೆ ನೋಡಿಕೊಳ್ಳಬೇಕು. ಗೆದ್ದಲ ಹುಳು, ಇರುವ, ಜರಿ, ಇಲಿ, ಹೆಗ್ಗಣ, ಕಪ್ಪೆ ಬೆಕ್ಕು ಹಕ್ಕಿ ಮುಂತಾದ ಪ್ರಾಣಿಗಳು ಸೇರದಂತೆ ಎಚ್ಚರವಹಿಸಬೇಕು ಹಾಗೂ ಆಹಾರವೆಲ್ಲ ಖಾಲಿಯಾದ ತಕ್ಷಣ ಅಂದರೆ, ಬರೀ ಹಿಕ್ಕೆ ತುಂಬಿದಾಗ ತಕ್ಷಣ ಹುಳು ಬೇರ್ಪಡಿಸಬೇಕು. ಇಲ್ಲದಿದ್ದರೆ ಅವು ಕ್ರಮೇಣ ಆಹಾರವಿಲ್ಲದೆ ಸಾಯುತ್ತವೆಂದರು.

ಕೃಷಿ ಅಧಿಕಾರಿ ಪವಿತ್ರಾ ಎಂ. ಜೆ. ತರಬೇತಿಗೆ ರೈತರ ನೋಂದಾವಣಿ ಮಾಡಿದರು. ಜಿಲ್ಲಾ ಕೃಷಿ ತರಬೇತಿಕೇಂದ್ರದ ಸಹಾಯಕ ಕೃಷಿ ನಿರ್ದೇಶಕರು (ರೈತ ಮಹಿಳೆ) ಉಷಾರಾಣಿ ಎಂ ಕಾರ್ಯಕ್ರಮದ ನಿರೂಪಣೆ ಮಾಡಿದರು. ಕಾರ್ಯಕ್ರಮದಲ್ಲಿ ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಸಿಬ್ಬಂದಿ ವರ್ಗದವರು ಹಾಗೂ ಜಿಲ್ಲೆಯ ವಿವಿಧ ಭಾಗದಿಂದ ಆಗಮಿಸಿದ ರೈತರು ಹಾಜರಿದ್ದರು.

---

ಖುಷಿಸಂಸ್ಕೃತಿ ಗುರುಕುಲ ಮಹಾಸಂಸ್ಥಾನ ಮನವಿ

## ಸಿದ್ಧಗಂಗಾಗೆ ಮರಣೋತ್ತರ 'ಭಾರತ ರತ್ನ' ಸಿಗಲಿ

» ಚಿತ್ರದುರ್ಗ

ರಾಷ್ಟ್ರ ಕಂಡ ಅತ್ಯುತ್ತಮ ರಾಜಕಾರಣಿಗಳಲ್ಲಿ ಒಬ್ಬರಾದ, ಬಿಜೆಪಿಯ ಭೀಷ್ಮ, ಮಾಜಿ ಉಪ ಪ್ರಧಾನಿ ಲಾಲ್ ಕೃಷ್ಣ ಅಡ್ವಾಣಿ ಅವರಿಗೆ ಭಾರತ ರತ್ನ ಘೋಷಿಸಲಾಗಿದೆ. ದೇಶದ ಅತ್ಯುನ್ನತ ನಾಗರಿಕ ಗೌರವಕ್ಕೆ ಕರ್ನಾಟಕದ ಸಿದ್ದಗಂಗಾ ಮಠದ ಶ್ರೀ ಶಿವಕುಮಾರ ಸ್ವಾಮೀಜಿ ಯವರಿಗೂ ಭಾರತ ರತ್ನ ನೀಡುವಂತೆ ಖುಷಿಸಂಸ್ಕೃತಿ ಗುರುಕುಲ ಮಹಾಸಂಸ್ಥಾನ ಧರ್ಮದರ್ಶಿಗಳಾದ ಟಿ.ರುದ್ರಮುನಿ ಅವರು ಕೇಂದ್ರ ಸರ್ಕಾರಕ್ಕೆ ಮನವಿ ಮಾಡಿದ್ದಾರೆ.

ಸಿದ್ದಗಂಗಾ ಮಠದ ಶಿವಕುಮಾರ ಸ್ವಾಮೀಜಿ ಅವರಿಗೆ ಮರಣೋತ್ತರ ಭಾರತ ರತ್ನ ಸಿಗಬೇಕು. ಈ ಗೌರವಕ್ಕೆ ಅವರಂತಹ ಅರ್ಹರು ಮತ್ತೊಬ್ಬರಿಲ್ಲ. ಅವರಿಗೆ ಈ ಹಿಂದೆಯೇ ಈ ಗೌರವ ಸಿಗಬೇಕಿತ್ತು. ಅನ್ನ, ಶಿಕ್ಷಣ ನೀಡಿ ಲಕ್ಷಾಂತರ ಮಂದಿಗೆ ಆಸರೆಯಾಗಿ ನಿಂತ ಮಹಾತ್ಮರು ಅವರಾಗಿದ್ದಾರೆ. ಸಿದ್ಧಗಂಗಾ ಶ್ರೀಗಳು ದೇಶಕ್ಕೆ ಮಾದರಿಯಾಗಿದ್ದವರು. ಹೀಗಾಗಿ ಈ ನಿಟ್ಟಿನಲ್ಲಿ ಪ್ರಧಾನಿ ನರೇಂದ್ರ ಮೋದಿ ಆದ್ಯತೆ ನೀಡಬೇಕು ಎಂದು ಮನವಿ ಮಾಡಿದ್ದಾರೆ.

ಶಿವಕುಮಾರ ಸ್ವಾಮೀಜಿ ಈ ಶತಮಾನ ಕಂಡ



ಅಪರೂಪದ ಶರಣರಾಗಿದ್ದವರು. ಶ್ರೀಗಳು ಅನ್ನ, ಅಕ್ಷರ ಮತ್ತು ಜ್ಞಾನ ದಾಸೋಹಗಳ ಮೂಲಕ ತ್ರಿವಿಧ ದಾಸೋಹವನ್ನು ಯಾವುದೇ ಪ್ರತಿಫಲಾಪೇಕ್ಷೆ ಇಲ್ಲದೆ ಮಾಡಿದವರು.

ಯಾವುದೇ ಜಾತಿ, ಧರ್ಮ ಭೇದ ಇಲ್ಲಿಲ್ಲ. ಎಲ್ಲರೂ ಒಂದೇ ಎಂಬ ರೀತಿಯಲ್ಲಿ ಸಹಾಯ. ಬೇಡಿ ಬಂದ ಲಕ್ಷಾಂತರ ಮಕ್ಕಳಿಗೆ ಉಚಿತ ಶಿಕ್ಷಣ, ವಸತಿ, ಆಹಾರ ನೀಡಿ ಸಮಾಜದಲ್ಲಿ ಒಂದು ಉತ್ತಮ ಸ್ಥಾನವನ್ನು ಹಾಗೂ ಹೆಸರನ್ನು ಗಳಿಸುವಂತೆ ಮಾಡಿದವರು ಅವರು ಎಂದು ಖುಷಿಸಂಸ್ಕೃತಿ ಗುರುಕುಲ ಮಹಾಸಂಸ್ಥಾನ ಆಡಳಿತಾಧಿಕಾರಿ ಮಾಲತೇಶ್ ಅರಸ್ ಹೇಳಿದ್ದಾರೆ.

ನಿಜವಾಗಿಯೂ ಭಾರತದ ಅಮೂಲ್ಯ ರತ್ನವಾಗಿರುವಂಥ ಕರ್ನಾಟಕದ ಈ ಮಹಾನ್ ಪುರುಷ, ಅವತಾರ ಪುರುಷರಾಗಿರುವ ಶಿವಕುಮಾರ ಶ್ರೀಗಳಿಗೆ ಕೇಂದ್ರ ಸರಕಾರವು ಮರಣೋತ್ತರ ಭಾರತ ರತ್ನ ಪ್ರಶಸ್ತಿಯನ್ನು ನೀಡಿ ಗೌರವಿಸುವುದು ಆದ್ಯ ಕರ್ತವ್ಯವಾಗಿದೆ ಎಂಬುದು ನನ್ನ ಭಾವನೆಯಾಗಿದೆ. ಇದು ಆರೂವರೆ ಕೋಟಿ ಕನ್ನಡಿಗರ ಅಭಿಮತವೂ ಆಗಿದೆ ಎಂಬುದು ಖುಷಿಸಂಸ್ಕೃತಿ ಗುರುಕುಲ ಮಹಾಸಂಸ್ಥಾನ ಅನ್ನಿಸಿಕೆ ಹೇಳಿದ್ದಾರೆ.

ತುಮಕೂರಿನ ಸಿದ್ದಗಂಗಾ ಮಠಾಧೀಶರಾದ ಡಾ. ಶಿವಕುಮಾರ ಸ್ವಾಮೀಜಿಯವರಿಗೂ ಭಾರತ ರತ್ನ ನೀಡಬೇಕಿತ್ತು. ಸಿದ್ದಗಂಗಾ ಶ್ರೀಗಳು ಅನ್ನ ದಾಸೋಹಕ್ಕೆ ಹೆಸರಾದವರು, ಅವರಿಗೂ ಗೌರವ ನೀಡಬೇಕು ಎನ್ನುವ ಒತ್ತಾಯ ಇದೆ. ಸಿದ್ದಗಂಗಾ ಶ್ರೀಗಳಿಗೆ ಭಾರತ ರತ್ನ ನೀಡುವಂತೆ ಕರ್ನಾಟಕ ಸರ್ಕಾರ ಪತ್ರ ಬರೆದಿತ್ತು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೇಳಿದ್ದರು ಅದನ್ನು ಕೇಂದ್ರ ಸರ್ಕಾರ ನೀಡುವ ಮೂಲಕ ಭಾರತ ರತ್ನಕೊಂದು ಘನತೆ ಬರಲಿದೆ ಎಂದಿದ್ದಾರೆ.

---

## ಹೊಸ ಕೃಷಿ ನವೋದ್ಯಮಗಳಿಗೆ ಆರ್ಥಿಕ ನೆರವು

» ಚಿತ್ರದುರ್ಗ

2023–24ನೇ ಸಾಲಿನ ಆಯವ್ಯಯದ ಕಂಡಿಕೆ–40ರಲ್ಲಿ ಕೃಷಿ ಉತ್ಪನ್ನಗಳ ಮೌಲ್ಯವರ್ಧನೆ ಮತ್ತು ಕೃಷಿ ಮಾರುಕಟ್ಟೆಗೆ ಸಂಬಂಧಿಸಿದ ವಲಯಗಳಲ್ಲಿ ನಾವಿನ್ಯತೆಯನ್ನು ಪ್ರೋತ್ಸಾಯಿಸುವ ನಿಟ್ಟಿನಲ್ಲಿ ಕೃಷಿ ಉದ್ಯಮಗಳಿಗೆ ಉತ್ತೇಜನ ನೀಡಲು ನವೋದ್ಯಮ ಎಂಬ ಹೊಸ ಯೋಜನೆಯನ್ನು ಅನುಷ್ಠಾನಗೊಳಿಸಲು ಅನುಮೋದನೆ ನೀಡಿ ಆದೇಶಿಸಿದೆ.

ಕೃಷಿ ಕ್ಷೇತ್ರದಲ್ಲಿ ಉದ್ಯಮಶೀಲತೆಯನ್ನು ಹೆಚ್ಚಿಸಲು ಹಾಗೂ ಗ್ರಾಮೀಣ ಭಾಗದ ಯುವಕರಿಗೆ ಉದ್ಯೋಗ ಸೃಜನೆಗಾಗಿ ಕೃಷಿಯಲ್ಲಿನ ನೂತನ ತಾಂತ್ರಿಕತೆಗಳು ಹಾಗೂ ನವೀನ ಪರಿಕಲ್ಪನೆಗಳ ವಾಣೀಜ್ಯೀಕರಣ ಉತ್ತೇಜಿಸುವ ಗುರಿಯೊಂದಿಗೆ ಕೃಷಿ ನವೋದ್ಯಮ ಕಾರ್ಯಕ್ರಮ ಅನುಷ್ಠಾನಗೊಳಿಸಲು ಯೋಜಿಸಲಾಗಿದ್ದು, ಯೋಜನೆಯು ಕೆಳಕಂಡ ಮೂರು ಪ್ರಮುಖ ಘಟಕಗಳನ್ನು ಒಳಗೊಂಡಿರುತ್ತದೆ. ಕೃಷಿ ಕ್ಷೇತ್ರದಲ್ಲಿ ನೂತನಪರಿಕಲ್ಪನೆಯೊಂದಿಗೆಆರಂಬಿಸುವಹೊಸಕೃಷಿನವೋದ್ಯಮಗಳಿಗೆ ಅನುಮೋದಿತ ಯೋಜನಾ ವರದಿಯ ಶೇ 50 ರಷ್ಟು ಸಹಾಯಧನವನ್ನು (ಕನಿಷ್ಟ ರೂ. 5.00 ಲಕ್ಷದಿಂದಗರಿಷ್ಟರೂ. 20.00 ಲಕ್ಷದವರೆಗೆ) ಬ್ಯಾಂಕ್ ಸಾಲದ ಮುಖಾಂತರ ನೀಡಲಾಗುವುದು.ಈಗಾಗಲೇ ಸ್ಥಾಪಿಸಲಾದ ನವೋದ್ಯಮಗಳ ವಿಸ್ತರಣೆ ಅಥವಾ ಮೇಲ್ದರ್ಜೆಗೇರಿಸಲು ಆರ್ಥಿಕ ನೆರವು ಕೃಷಿ ಕ್ಷೇತ್ರದಲ್ಲಿ ಈಗಾಗಲೇ ಸ್ಥಾಪಿಸಲಾದ ನವೋದ್ಯಮಗಳ ವಿಸ್ತರಣೆ ಹಾಗೂ ಉನ್ನತೀಕರಣಕ್ಕಾಗಿಯೋಜನಾ ವರದಿಯಶೇ 50 ರಷ್ಟು ಸಹಾಯಧನವನ್ನು (ಕನಿಷ್ಟ ರೂ. 20.00 ಲಕ್ಷದಿಂದ ಗರಿಷ್ಟರೂ. 50.00 ಲಕ್ಷದವರೆಗೆ) ಬ್ಯಾಂಕ್ ಸಾಲದ ಮುಖಾಂತರ ನೀಡಲಾಗುವುದು. ಕೃಷಿ ನವೋದ್ಯಮಗಳ ಸಮಾಥ್ಯಾಭಿವೃದ್ಧಿ ಕಾರ್ಯಕ್ರಮ ಆಯ್ಕೆಯಾದ ನವೋದ್ಯಮಿಗಳ ಸಮಾಥ್ಯಾಭಿವೃದ್ಧಿಗೆ ಕೃಷಿ ವಿಶ್ವವಿದ್ಯಾಲಯ, ಖಅಂಖ, ಅಈಖಿಖಖ, ಅಖಖಖ,ಅ–ಅಂಔಕ ಹಾಗೂ ಇತರೆ ಸಂಶೋಧನಾ ಸಂಸ್ಥೆಗಳಾದ ವಿಧ್ಯುನ್ಮಾನ ಮಾಹಿತಿ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯಡಿ ಸ್ಥಾಪಿತವಾಗಿರುವ ಕೃಷಿ ನಾವೀನ್ಯತೆಗಾಗಿ ಶ್ರೇಷ್ಟತೆಯ ಕೇಂದ್ರಗಳ ಮೂಲಕ ತರಬೇತಿಗಳನ್ನು ನೀಡಲಾಗುವುದು. ಈ ಕಾರ್ಯಕ್ರಮಕ್ಕಾಗಿ ಪ್ರತ್ಯೇಕವಾಗಿ ಅನುದಾನ ನಿಗಧಿ ಪಡಿಸಲಾಗಿದ್ದು, ಕೃಷಿ ನವೋದ್ಯಮಿಗಳಿಗೆ ತರಬೇತಿ ನೀಡುವ ಸಂಸ್ಥೆಗಳಿಗೆ ತರಬೇತಿ ಶುಲ್ಕವನ್ನು ಪಾವತಿಸಲಾಗುವುದುಜಿಲ್ಲೆಯ ಕೃಷಿಕರು ಈ ಕಾರ್ಯಕ್ರಮದ ಸದುಪರ್ಯೋಗ ಪಡಿಸಿಕೊಳ್ಳಬೇಕು ಎಂದು ಜಂಟಿ ಕೃಷಿ ನಿರ್ದೇಶಕರು ಕೋರಿದ್ದಾರೆ.

---

## ನಗರಸಭೆಯ ಆಯವ್ಯಯ: 2ನೇ ಬಾರಿಯ ಸಭೆ ಇಂದು

» ಚಳ್ಳಕೆರೆ

ನಗರಸಭೆಯ 2024–25ನೇ ಸಾಲಿನ ಬಜೆಟ್ ಹಿನ್ನೆಲೆಯಲ್ಲಿ ಎರಡನೇ ಬಾರಿಗೆ ಪೂರ್ವಬಾವಿ ಸಭೆಯನ್ನು ಫೆ.7ರ ಬುಧವಾರ ಬೆಳಗ್ಗೆ 10.30ಕ್ಕೆ ನಗರಸಭೆಯ ಸಭಾಂಗಣದಲ್ಲಿ ಕರೆಯಲಾಗಿದೆ. ಪೌರಾಯುಕ್ತ ಸಿ.ಚಂದ್ರಪ್ಪ ಈ ಬಗ್ಗೆ ಮಾಹಿತಿ ನೀಡಿ, ಬಜೆಟ್‌ಗೂ ಮುನ್ನ ನಾಗರೀಕರ ಹಾಗೂ ಸಮಾಜದ ವಿವಿಧ ಗಣ್ಯರ ಅಭಿಪ್ರಾಯಗಳನ್ನು ಪಡೆದು ಬಜೆಟ್ ಮಂಡಿಸಲಾಗುವುದು. ಕಳೆದ ಜನವರಿಯಲ್ಲಿ ನಡೆದ ಪೂರ್ವಬಾವಿ ಸಭೆಯಲ್ಲಿ ಸಾರ್ವಜನಿಕರಿಂದ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದ್ದು, ಇಂದಿನ ಸಭೆಗೂ ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಸಲಹೆ ಸೂಚನೆ ನೀಡುವಂತೆ ಮನವಿ ಮಾಡಿದ್ದಾರೆ.

---

## ಪ್ರಮುಖ ಸುದ್ದಿ

ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಮೂಗಪ್ಪ ಸಲಹೆ

# ಸತ್ತಮೇಲೂ ಬದುಕಿರಬೇಕಾದರೆ ಅಂಗಾಂಗ ದಾನ ಮಾಡಿ

» ಚಿತ್ರದುರ್ಗ

ಮೆದುಳು ನಿಷ್ಕ್ರಿಯಗೊಂಡ ನಂತರ ಅಂಗಾಂಗ ದಾನ ಮಾಡುವುದರ ಮುಖಾಂತರ ಮತ್ತೊಬ್ಬರ ಜೀವ ಉಳಿಸಬಹುದು ಎಂದು ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಮೂಗಪ್ಪ ಹೇಳಿದರು.

ತಾಲ್ಲೂಕಿನ ಸಿರಿಗೆರೆ ಎಂ ಬಸವಯ್ಯ ಪದವಿ ಪೂರ್ವ ಕಾಲೇಜಿನಲ್ಲಿ ಎನ್‌ಹೆಚ್‌ಎಂ ಅಡಿಯಲ್ಲಿ ವಿದ್ಯಾರ್ಥಿಗಳಿಗೆ ರಸಪ್ರಶ್ನೆ ಕಾರ್ಯಕ್ರಮ ಆಯೋಜಿಸುವ ಮುನ್ನ ಮಾಹಿತಿ ಶಿಕ್ಷಣ ಸಂವಹನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಕರ್ನಾಟಕದಲ್ಲಿ ಜೀವ ಸಾರ್ಥಕತೆ 2017ರಲ್ಲಿ ಜಾರಿ ಜಾರಿಯಾಗಿದ್ದು, ಐದು ವರ್ಷದಿಂದ 65 ವರ್ಷ ವಯಸ್ಸಿನವರು ಅಂಗಾಂಗ ದಾನ ಮಾಡಬಹುದು. ಜೀವ ಸಾರ್ಥಕತೆ ವೆಬ್‌ಸೈಟ್‌ನಲ್ಲಿ ಮೊದಲು ಅಂಗಾಂಗದಾನ ವಿಲ್ ಮಾಡಬೇಕು ಎಂದರು.

ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ





ಎನ್.ಎಸ್.ಮಂಜುನಾಥ್ ಮಾಹಿತಿ ನೀಡುತ್ತಾ, ಆಯುಷ್ಮಾನ್ ಭಾರತ ಪ್ರಧಾನ ಮಂತ್ರಿ ಜನ ಆರೋಗ್ಯ ಯೋಜನೆ ಅತ್ಯಂತ ಕ್ರಾಂತಿಕಾರಿ ಯೋಜನೆಯಾಗಿದ್ದು, ಆಯುಷ್ಮಾನ್ ಭವ ಕಾರ್ಡ್‌ಗಳನ್ನು ಮಾಡಿಸಿಕೊಂಡು ಪ್ರತಿಯೊಬ್ಬರೂ ನಿಯಮಾನುಸಾರ ಆರೋಗ್ಯ ಸೇವಾ ಸೌಲಭ್ಯಗಳನ್ನು ಪಡೆಯಬೇಕು ಎಂದು ತಿಳಿಸಿದರು. ಈ ಸಂಜೀವಿನಿ ಇದು ಒಂದು ಇಂಟರ್ನೆಟ್ ಆಧಾರಿತ ಟೆಲಿ ಮೆಡಿಸಿನ್ ವೇದಿಕೆಯಾಗಿದ್ದು, ಮನೆಯಿಂದಲೇ ತಜ್ಞ ವೈದ್ಯರೊಂದಿಗೆ ಸಮಾಲೋಚನೆ ನಡೆಸುವ ಯೋಜನೆ ಇದಾಗಿದೆ. ಇದು ಕೋವಿಡ್ ನಂತರ ಜಾರಿಗೆ ಬಂದಿದ್ದು ಎಲ್ಲಾ ವರ್ಗದವರು ಈ ಯೋಜನೆಯ ಸೌಲಭ್ಯ ಪಡೆಯಬಹುದು. ಆಸ್ಪತ್ರೆಗಳಲ್ಲಿ ಜನಸಂದಣಿ ಕಡಿಮೆ ಮಾಡುವ ಉದ್ದೇಶದಿಂದ ಯೋಜನೆ ಜಾರಿಯಲ್ಲಿದ್ದು ಓ ಪಿ ಡಿ ಮೂಲಕ ತಜ್ಞ ವೈದ್ಯರನ್ನು ಸಂಪರ್ಕಿಸಿದ ನಂತರ ಮೆಡಿಸಿನ್ ಚೀಟಿ ಪಡೆಯಬಹುದಾಗಿದೆ ಎಂದರು. ಪ್ರಾಂಶುಪಾಲರಾದ ಪ್ರವೀಣ್ ಕುಮಾರ್ ಮಾಹಿತಿ ನೀಡುತ್ತಾ, ಆರೋಗ್ಯ ಕಾರ್ಯಕ್ರಮಗಳು ವಿದ್ಯಾರ್ಥಿ ಜೀವನಕ್ಕೆ ಉಪಯುಕ್ತವಾಗುತ್ತಿದ್ದು, ಪೋಷಕರಲ್ಲಿ ಆರೋಗ್ಯ ಕಾರ್ಯಕ್ರಮಗಳ ಮಾಹಿತಿ ತಿಳಿಸುತ್ತಾ ಇದರ ಸದುಪಯೋಗಪಡಿಸಿಕೊಳ್ಳಬೇಕೆಂದರು. ಆರೋಗ್ಯ ನಿರೀಕ್ಷಣಾಧಿಕಾರಿ ಸುನಿಲ್ ಕುಮಾರ್, ಆಶಾಕಾರ್ಯಕರ್ತೆ ವನಜಾಕ್ಷಮ್ಮ ಸೇರಿದಂತೆ ಕಾಲೇಜಿನ ಉಪನ್ಯಾಸರು ಮತ್ತು ವಿದ್ಯಾರ್ಥಿಗಳು ಇದ್ದರು.

## ಫಾಸ್ಟ್ ನ್ಯೂಸ್

### ಎಸ್‌ಡಿಆರ್‌ಎಫ್ ತಂಡದಿಂದ ಅಣಕು ರಕ್ಷಣಾ ಪ್ರದರ್ಶನ

» ದಾವಣಗೆರೆ

ತುರ್ತು ಸಂದರ್ಭಗಳಲ್ಲಿ ಜನರು ಮತ್ತು ಆಸ್ತಿ, ಪಾಸ್ತಿಗಳ ರಕ್ಷಣೆ ಮಾಡಿಕೊಳ್ಳುವ ಬಗ್ಗೆ ಎನ್.ಡಿ.ಆರ್.ಎಫ್ ಮತ್ತು ಎಸ್.ಡಿ.ಆರ್.ಎಫ್ ತಂಡದಿಂದ ಅಣಕು ಪ್ರದರ್ಶನಗಳನ್ನು ಏರ್ಪಡಿಸಲಾಗುತ್ತದೆ ಎಂದು ಜಿಲ್ಲಾಧಿಕಾರಿ ಡಾ; ವೆಂಕಟೇಶ್ ಎಂ.ವಿ ತಿಳಿಸಿದರು. ಅವರು ಮಂಗಳವಾರ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ನಡೆದ ಎನ್.ಡಿ.ಆರ್.ಎಫ್ ಮತ್ತು ಎಸ್.ಡಿ.ಆರ್.ಎಫ್ ತಂಡದ ಅಧಿಕಾರಿಗಳೊಂದಿಗೆ ನಡೆದ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಕೇಂದ್ರ ಹಾಗೂ ರಾಜ್ಯ ವಿಪತ್ತು ನಿರ್ವಹಣಾ ತಂಡದಿಂದ ಅಣಕು ಪ್ರದರ್ಶನವನ್ನು ಫೆಬ್ರವರಿ 6 ರಿಂದ 19 ರ ವರೆಗೆ ವಿವಿಧ ಸ್ಥಳಗಳಲ್ಲಿ ಅಣಕು ಪ್ರದರ್ಶನ ಏರ್ಪಡಿಸುವ ಮೂಲಕ ಸಾರ್ವಜನಿಕರಿಗೆ, ಶಾಲಾ, ಕಾಲೇಜಿನ ವಿದ್ಯಾರ್ಥಿಗಳಿಗೆ ಅರಿವು ಮೂಡಿಸಲಾಗುತ್ತದೆ ಎಂದರು. ಫೆಬ್ರವರಿ 6.ರಂದು ತಹಶೀಲ್ದಾರ್, ಅಗ್ನಿಶಾಮಕ, ಅರಣ್ಯ, ಪೊಲೀಸ್, ನೆಹರು ಯುವ ಕೇಂದ್ರ, ಗೃಹರಕ್ಷಕದಳ, ಹಾಗೂ ಇತತರಿಗೆ, ಫೆ.7 ರಂದು ತುಂಗಭದ್ರಾ ಸಭಾಂಗಣದಲ್ಲಿ ಅರ್ಧ ದಿನ ತಹಶೀಲ್ದಾರ್, ಜಿಲ್ಲಾಧಿಕಾರಿಗಳ ಕಚೇರಿ, ಅರಣ್ಯ, ಪೊಲೀಸ್, ಅಗ್ನಿ ಶಾಮಕ ಹಾಗೂ ಇತರೆ ಇಲಾಖೆಯವರಿಗೆ ತುರ್ತು ರಕ್ಷಣಾ ಕಾರ್ಯಗಳ ನಿರ್ವಹಣೆ, ಫೆ.8 ತುರ್ತು ನಿರ್ವಹಣೆಗೆ ಸಂಬಂಧಿಸಿದಂತೆ ದಾವಣಗೆರೆ ದೇವರಾಜ ಅರಸು ಮೈದಾನದಲ್ಲಿ, ಫೆ.9 ರಂದು ಹರಿಹರದ ಗಾಂಧಿ ಮೈದಾನ, ಫೆ.10 ರಂದು ದಾವಣಗೆರೆ ವಿದ್ಯಾನಗರದಲ್ಲಿನ ತರಳಬಾಳು ಶಾಲೆಯಲ್ಲಿ ತುರ್ತು ರಕ್ಷಣೆ, ಫೆ.12 ರಂದು ಹಾಲವರ್ತಿ ಬನ್ಸಲ್ ಆರಾಧ್ಯ ಸ್ಟೀಲ್ ಪ್ರೈ.ಲಿ ಇಲ್ಲಿಗೆ ಭೇಟಿ ನೀಡಿ ಕೆಮಿಕಲ್ ಅವಘಡಗಳ ನಿಯಂತ್ರಣದ ಕುರಿತು, ಫೆ.13 ರಂದು ನಿಟುವಳ್ಳಿಯ ಸಿದ್ದಗಂಗಾ ಶಾಲೆಯಲ್ಲಿ ತುರ್ತು ಸಂದರ್ಭ ನಿರ್ವಹಣೆ, ಫೆ.14 ರಂದು ದಾವಣಗೆರೆಯಲ್ಲಿ ಸೀತಮ್ಮ ಹೈಸ್ಕೂಲ್‌ನಲ್ಲಿ ಅವಘಡಗಳಿಂದ ಶಾಲಾ ರಕ್ಷಣೆ ಮತ್ತು ವನಮಹೋತ್ಸವ, ಫೆ.15 ರಂದು ಹರಿಹರದ ಮರಿಯನಿವಾಸ್ ಶಾಲೆಯಲ್ಲಿ ತುರ್ತು ಮುಂಜಾಗ್ರತ ಕ್ರಮ, ಫೆ.16 ರಂದು ದಾ.ವಿ.ವಿ.ನಲ್ಲಿ ಸ್ವಯಂ ಸೇವಕರಿಗೆ ಒಂದು ದಿನದ ತರಬೇತಿ, ಫೆ.17 ರಂದು ದಾವಣಗೆರೆ ತಾ.ಪಂ.ನಲ್ಲಿ ವಿಶೇಷಚೇತನರನ್ನು ನಾಗರೀಕ ಸೇವೆಯಲ್ಲಿ ಸಂಘಟನೆ ಬಗ್ಗೆ ತರಬೇತಿ, ಫೆ.19 ರಂದು ಸೈಬರ್ ಸೆಕ್ಯೂರಿಟಿ ಮತ್ತು ಸಾಮಾಜಿಕ ಮಾಧ್ಯಮಗಳ ಬಳಕೆ ಕುರಿತು ತರಬೇತಿ ನಡೆಯಲಿದೆ. ಮತ್ತು ತುರ್ತು ಸಂದರ್ಭಗಳಲ್ಲಿ ಸಾರ್ವಜನಿಕರು ಸಂಪರ್ಕಿಸಲು ನೀಡಿರುವ ಸಹಾಯವಾಣಿ ಸಂಖ್ಯೆಗಳನ್ನು ಜಿಲ್ಲೆಯ ಪ್ರತಿ ಕಚೇರಿಗಳಲ್ಲಿ ಮತ್ತು ಶಾಲಾ, ಕಾಲೇಜು ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಪ್ರಕಟಿಸಲು ಸೂಚಿಸಲಾಯಿತು. ಯಾವುದೇ ಸಾರ್ವಜನಿಕ ಆಸ್ತಿ, ಜನ, ಜಾನುವಾರು, ಜೀವ ಹಾನಿಯಾಗದಂತೆ ಎಂತಹ ಸಂದರ್ಭದಲ್ಲಿಯೂ ಜಾಗೃತಿಯಿಂದ ಸಿದ್ದವಿರಲು ಮತ್ತು ರಕ್ಷಣಾತ್ಮಕ ಕಾರ್ಯಗಳ ಬಗ್ಗೆ ಜಾಗೃತಿ ಮೂಡಿಸಲು ಸೂಚಿಸಲಾಯಿತು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಸೈಯ್ಯದಾ ಆಫ್ರಿನ್ ಭಾನು ಎಸ್.ಬಳ್ಳಾರಿ, ಉಪಕಾರ್ಯದರ್ಶಿ ಕೃಷ್ಣನಾಯ್ಕ, ಎನ್.ಡಿ.ಆರ್.ಎಫ್ ತಂಡದ ಅಜಯ್ ಕುಮಾರ್ ಮತ್ತು ತಂಡದ ಇತರೆ ಸದಸ್ಯರು ಉಪಸ್ಥಿತರಿದ್ದರು.

### ವಿದ್ಯುತ್ ವ್ಯತ್ಯಯ

» ದಾವಣಗೆರೆ

ದಾವಣಗೆರೆ ವಿದ್ಯುತ್ ವಿತರಣಾ ಕೇಂದ್ರದಿಂದ ಹೊರಡುವ ಮಾರ್ಗದಲ್ಲಿ ಪಾಲಿಕೆ ವತಿಯಿಂದ ರಸ್ತೆ ಕಾಮಗಾರಿ ಕೈಗೊಂಡಿರುವುದರಿಂದ ಫೆ.7 ರಂದು ಬೆಳಿಗ್ಗೆ 11 ರಿಂದ ಮಧ್ಯಾಹ್ನ 2 ಗಂಟೆಯವರೆಗೆ ಎಂ.ಸಿ.ಸಿ.ಬಿ ಎಫ್.2 ಫೀಡರ್ ವ್ಯಾಪ್ತಿಯ ಶಾಮನೂರು ರಸ್ತೆ, ಎಸ್.ಎಸ್. ಲೇಔಟ್ ಎ ಬ್ಲಾಕ್, ಕುವೆಂಪು ನಗರ, ಸಿದ್ದವೀರಪ್ಪ ಬಡಾವಣೆ, ಎಂ.ಸಿ.ಸಿ ಬಿ ಬ್ಲಾಕ್, ಬಿ.ಐ.ಇ.ಟಿ ರಸ್ತೆ, ಗ್ಲಾಸ್‌ಹೌಸ್ ಏರಿಯಾ ಹಾಗೂ ಸುತ್ತ ಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಬೆಸ್ಕಾಂ ಪ್ರಕಟಣೆ ತಿಳಿಸಿದೆ.

### ಕುರುಡಿಹಳ್ಳಿ ಶ್ರೀದುರ್ಗಾಂಭಿಕಾ ದೇವಿ ಜಾತ್ರೆ ಆರಂಭ

» ಚಳ್ಳಕೆರೆ

ತಾಲ್ಲೂಕಿನ ಕುರುಡಿಹಳ್ಳಿ ಗ್ರಾಮದ ಶ್ರೀದುರ್ಗಾಂಭಿಕಾದೇವಿ ಜಾತ್ರಾ ಮಹೋತ್ಸವ ಫೆ.6ರಿಂದ8ರ ತನಕ ನಡೆಯಲಿದೆ ಎಂದು ದೇವಸ್ಥಾನದ ವ್ಯವಸ್ಥಾಪಕರು ತಿಳಿಸಿದ್ದಾರೆ. ಈ ಬಗ್ಗೆ ಮಾಹಿತಿ ನೀಡಿದ ಅವರು, ಫೆ.6ರ ಮಂಗಳವಾರ ಜಲಗಂಗಾಪೂಜೆಯೊಂದಿಗೆ ಜಾತ್ರಾ ಮಹೋತ್ಸವ ಆರಂಭವಾಗಲಿದೆ. ಫೆ.7ರ ಬುಧವಾರ ಬೇವಿನಸೀರೆ, ಹಿಟ್ಟಿನಾರತಿ, ಮಹಾಮಂಗಳಾರತಿ ಕಾರ್ಯಕ್ರಮವಿರುತ್ತದೆ.ಫೆ.8ರಗುರುವಾರಮಧ್ಯಾಹ್ನ ದೇವಿಗೆ ಉಡಿತುಂಬಿ, ಮಂಗಳವಾದ್ಯಗಳೊಂದಿಗೆ ಗ್ರಾಮದ ಪ್ರಮುಖ ರಸ್ತೆಗಳಲ್ಲಿ ಭವ್ಯವಾದ ಮೆರವಣಿಗೆ ನಡೆಸಿ ಗುಡಿತುಂಬುವ ಕಾರ್ಯಕ್ರಮದೊಂದಿಗೆ ಜಾತ್ರಾ ಮಹೋತ್ಸವ ಮುಕ್ತಾಯವಾಗಲಿದೆ. ಕಾರ್ಯಕ್ರಮದಲ್ಲಿ ಕ್ಷೇತ್ರದ ಶಾಸಕ ಟಿ.ರಘುಮೂರ್ತಿ, ಮಾಜಿ ತಾಲ್ಲೂಕು ಪಂಚಾಯಿತಿ ಸದಸ್ಯ ಜಿ.ಟಿ.ತಿಪ್ಪೇಶ್, ಗ್ರಾಮ ಪಂಚಾಯಿತಿ ಅಧ್ಯಕ್ಷೆ ಜಿ.ಆರ್.ರಾಧ, ಸದಸ್ಯರಾದ ಅಂಬಿಕಾ, ಡಿ.ಪಿ.ಸುರೇಶ್, ಕೆ.ಶಿವಣ್ಣ, ರಾಮಸ್ವಾಮಿ, ಬೇಬಿಬಾಯಿ ಮುಂತಾದವರು ಕಾರ್ಯಕ್ರಮದಲ್ಲಿ ಭಾಗವಹಿಸುವರು.

# ವಿದ್ಯುತ್ ಕಣ್ಣಾಮುಚ್ಚಾಲೆ: ರಿಪೇರಿಗೆ ಬಂದ ಪಂಪ್‌ಸೆಟ್‌ಗಳೊಂದಿಗೆ ಪ್ರತಿಭಟನೆಗೆ ಇಳಿದ ರೈತರು

» ಮಹದೇವಪುರ ಶಿವಮೂರ್ತಿ.

» ನಮ್ಮ ಜನ ಸಮಾಚಾರ





ಪರಶುರಾಂಪುರ: ಕೃಷಿ ಸಂಬಂಧಿತ ಪಂಪ್ ಸೆಟ್ ಗಳಿಗೆ ಸರಬರಾಜು ಆಗುವ ವಿದ್ಯುತ್ ಲೋ ಮತ್ತು ಓವರ್ ವೋಲ್ಟೇಜ್‌ಗೆ ಪಂಪ್ ಸೆಟ್ ರಿಪೇಕಂಗಾಲಾದ ರೈತರು ಕ್ಯಾದಿಗುಂಟೆ – ಸಿದ್ದೇಶ್ವರನದುಗ9 ಭಾಗದ ರೈತರು ಬೆಸ್ಕಾಂ ಆವರಣದಲ್ಲಿ ಮಂಗಳವಾರ ದಿಢೀರ್ ಪ್ರತಿಭಟನೆ ನಡೆಸಿದರು.

ಇದರಿಂದ ಆಕ್ರೋಶಗೊಂಡಿರುವ ರೈತರು, ವಿದ್ಯುತ್ ವ್ಯತ್ಯಯದಿಂದ ಸುಟ್ಟು ಹೋದ ಪಂಪ್ ಸೆಟ್‌ಗಳನ್ನ ತಂದು ರೈತರು ಪ್ರತಿಭಟನೆ ನಡೆಸಿದರು.

ಈ ನಡುವೆ ವಿದ್ಯುತ್ ವ್ಯತ್ಯಯ ಜತೆಗೆ ಕಣ್ಣಾಮುಚ್ಚಾಲೆಯಿಂದ ವಾರಕ್ಕೆ ಎರಡ್ಮೂರು ಬಾರಿ ಪಂಪ್ ಸೆಟ್ ಸುಟ್ಟು ಹೋಗುವುದರ ಜತೆ ಪರಿವತ9ಕಗಳು ಸುಟ್ಟು ಹೋಗುತ್ತಿರುವುದರಿಂದ ಇದರ ಅಲಂಬಿತ ರೈತರು ಹಾಕಿದ ಬೆಳೆ ಕಳೆದುಕೊಳ್ಳಬೇಕಾದ ಪರಿಸ್ಥಿತಿಯಲ್ಲಿದ್ದಾರೆ.ಮುಂಗಾರು ಮತ್ತು ಹಿಂಗಾರು ಬೆಳೆಗಳು ಈಗಾಗಲೇ ಕೈಕೊಟ್ಟಿದ್ದು, ರೈತ ಸಂಕಷ್ಟದಲ್ಲಿದ್ದಾರೆ. ಮಳೆ ಕೊರತೆಯಿಂದ ಈಗಾಗಲೇ ರೈತರು ಸಾಕಷ್ಟು ಸಾಲ ಮಾಡಿಕೊಂಡು ಕೈಬಿಟ್ಟು ಕೊಂಡಿದ್ದಾರೆ . ಇಷ್ಟಾದರೂ 3 ಫೇಸ್ ವಿದ್ಯುತ್ ಸರಿಯಾಗಿ ನೀಡುತ್ತಿಲ್ಲ. ಹೀಗಾಗಿ ಬೆಳೆದ ಬೆಳೆಗಳು ಒಣಗುತ್ತಿದ್ದು, ರೈತರ ಬದುಕು ಬೀದಿಗೆ ಬಂದಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಕಳಕಳಿ ಬೇಕು: ರೈತ ಬರಗಾಲಕ್ಕೆ ಸಿಕ್ಕಿಬಿದ್ದು, ಸಂಕಷ್ಟದ ಜೀವನ ನಡೆಸುತ್ತಿದ್ದು, ಪಂಪ್‌ಸೆಟ್ ಅವಲಂಬಿತ ರೈತರು ಅಲ್ಪಸ್ವಲ್ಪ ಬೆಳೆಬೆಳೆಯುವಾಗಕೈಬಂದತುತ್ತುಬಾಯಿಗೆ ಬರದಿದ್ದರೂ,ಇಷ್ಟಾದರೂ ಸಮರ್ಪಕವಾಗಿ ವಿದ್ಯುತ್ ಪೂರೈಕೆಯಾಗುತ್ತಿಲ್ಲ, ಬೆಳೆದ ಬೆಳೆ ಆರೈಕೆ ಮಾಡುವ ಬದಲು, ವಿದ್ಯುತ್ ಪೂರೈಕೆಗಾಗಿ ಹೋರಾಟ ಮಾಡಬೇಕಿದೆ ಎಂದು ರೈತ ಸತ್ಯ ನಾರಾಯಣ ಸ್ವಾಮಿ ಕಿಡಿಕಾರಿದರು.

ಕೂಲಿ ಮಾಡಿ ಪಂಪ್ ಸೆಟ್ ರಿಪೇರಿ: ವೇಳಾಪಟ್ಟಿಯ ಅನುಗುಣವಾಗಿ ವಿದ್ಯುತ್ ಪೂರೈಕೆ ಆಗದೆ ಬೆಳೆಗಳು ಒಣಗುತ್ತಿರುವುದು ಒಂದು ಕಡೆ ಆದರೆ ಪಂಪ್ ಸೆಟ್ ಆನ್ ಇದ್ದಾಗಲೇ,ಒಮ್ಮೆಲೆ ಒಂದೆರಡು ಪೇಸ್ ಬರುವುದು.ಆಗ ನೀರು ಬರದೇ ಮೋಟಾರ್ ರನ್ನಿಂಗ್ ಇರುವುದು.ಬಳಿಕ ತಕ್ಷಣ ತ್ರಿ ಪೇಸ್ ವಿದ್ಯುತ್ ಬಂದರೇ ಯಾವ ಪಂಪ್ ಸೆಟ್ ನಿಲ್ಲುತ್ತೇ ಸರ್ .ಗಂಡ ಜಮೀನಲ್ಲಿ ವಿದ್ಯುತ್ ಕಾಯ್ದುಕೊಂಡು ಕೂತರೆ ವಿದ್ಯುತ್ ವ್ಯತ್ಯಯದಿಂದಾಗಿ ಸುಟ್ಟು ಹೋದ ಪಂಪ್ ಸೆಟ್ ನ್ನ ಹೆಂಡತಿ ಕೂಲಿ ಮಾಡಿದ ಹಣದಿಂದ ವಾರದಲ್ಲಿ ಎರಡ್ಮೂರು ಬಾರಿ ರಿಪೇರಿ ಬಂದರೇ ಹೇಗೆ ಎಂದು ಕಣ್ಣೀರಿಡುತ್ತಾ ರೈತ ನಾಗರಾಜ ಅಳಲನ್ನು ರೈತರು ತೋಡಿಕೊಂಡರು.



**ಪಂಪ್ ಸೆಟ್ ರಿಪೇರಿ ಅಂಗಡಿಗಳು ಮುಂದೆ ರೈತರ ಗುಂಪು:** ಇದು ಸಿದ್ದೇಶ್ವರನದುಗ9 ಹಾಗೂ ಕ್ಯಾದಿಗುಂಟೆ ರೈತರನ್ನು ಸುಟ್ಟು ಹೋದ ಪಂಪ್ ಸೆಟ್ ರಿಪೇರಿ ಮಾಡಿಸುತ್ತಿರುವ ದೃಶ್ಯ ಪಂಪ್ ಸೆಟ್ ರಿಪೇರಿ ಅಂಗಡಿಗಳ ಮುಂದೆ ಗುಂಪು ರೈತರ ಬಳಗ ಕೇಳಿದರೆ ವೋಲ್ಟೇಜ್ ಏರುಪೇರಾಗಿ ಕಡಿಮೆ ಅಂದರೂ ವಾರಕ್ಕೆ ಎರಡು ಸಲಾ ಸುಟ್ಟು ಹೋಗುತ್ತಿದೆ.ನಮಗಂತೂ ಸಾಕಾಗಿದೆ ರಿಪೇರಿ ಬಂದು ಬಂದು ಸಾಕಾಗಿದೆ ಎನ್ನುವುದು ರೈತ ಸಣ್ಣಪ್ಪರ ಅಳಲು.

ಎಚ್ಚರಿಕೆ:ಮಳೆ ಇಲ್ಲದೆ ಬರಗಾಲದಿಂದ ತತ್ತರಿಸಿರುವ ರೈತರು ತಮ್ಮ ಬೆಳೆಗಳನ್ನು ಉಳಿಸಿಕೊಳ್ಳಲು ಆಸರೆಯಾದ ಪಂಪ್ ಸೆಟ್ ಗೆ ವಿದ್ಯುತ್ ವ್ಯತ್ಯಯದಿಂದಾಗಿ ಬೆಳೆಗಳು ಒಣಗುವುದರ ಜತೆ ನಷ್ಟ ಅನುಭವಿಸುತ್ತಿದ್ದಾರೆ.ವಿಷಯ ತಿಳಿದು ಸ್ಥಳಕ್ಕೆ ಬಂದ ಪಿಆರ್ ಪುರ ಬೆಸ್ಕಾಂ ಶಾಖೆಯ ಎಸ್‌ಓ ಶಿವಕುಮಾರ್ ಗೆ ಮನವಿ ಜತೆಗೆ ಪತ್ರ ನೀಡಿದರು.ಈ ವೇಳೆಯಲ್ಲಿ ಮಾತನಾಡಿ ಈ ಬಗ್ಗೆ ಮೇಲಾಧಿಕಾರಿಗಳ ಗಮನಕ್ಕೆ ತಂದು ಒಂದು ತಿಂಗಳ ಕಾಲಾವಕಾಶದಲ್ಲಿ ಸರಿಪಡಿಸಲು ಕ್ರಮ ವಹಿಸಲಾಗುವುದು ಎಂದರು.


ಈಗಿರುವಾಗ ವಿದ್ಯುತ್ ವ್ಯತ್ಯಯ ಉಂಟಾದರೆ ಮುಂದಿನ ದಿನಗಳಲ್ಲಿ ಸಂಬಂಧ ಪಟ್ಟವರ ಎಲ್ಲರ ವಿರುದ್ಧ ಮುಂದಿನ ದಿನಗಳಲ್ಲಿ ರಸ್ತೆ ತಡೆ,ಉಗ್ರ ಹೋರಾಟ ಮಾಡುವುದಾಗಿ ರೈತರು ಎಚ್ಚರಿಸಿದರು.ಈ ಸಮಯದಲ್ಲಿ ರೈತರಾದ ಶಿವಣ್ಣ , ಸತ್ಯನಾರಾಯಣ ಸ್ವಾಮಿ,ನಾಗರಾಜ, ಯೋಗೀಶ್, ರಂಗನಾಥ, ಮಲ್ಲಿಕಾರ್ಜುನ, ದಿವಾಕರ, ಮುದ್ದರಾಜ ಸೇರಿದಂತೆ ಕ್ಯಾದಿಗುಂಟೆ– ಸಿದ್ದೇಶ್ವರನದುಗ9 ರೈತರ ಜೊತೆ ಸಾವ9ಜನಿಕರು ಉಪಸ್ಥಿತರಿದ್ದರು.

# ಕಾಂಗ್ರೆಸ್ ಪಕ್ಷಕ್ಕೆ ಲೋಕಸಭಾ ಚುನಾವಣೆಯಲ್ಲಿ ಜನರೇ ಬುದ್ದಿ ಕಲಿಸುತ್ತಾರೆ: ವಿಪ ಸದಸ್ಯ ಎನ್.ರವಿಕುಮಾರ್

» ಚಳ್ಳಕೆರೆ

ಕಳೆದ ಎಂಟು ತಿಂಗಳಿನಿಂದ ರಾಜ್ಯದಲ್ಲಿ ಆಡಳಿತ ನಡೆಸುತ್ತಿರುವ ಮುಖ್ಯಮಂತ್ರಿ ಎಸ್.ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ಗ್ಯಾರಂಟಿ ಯೋಜನೆಗಳ ಟ್ರಂಕಾರ್ಡ್ ಆಧಾರದ ಮೇಲೆ ಲೋಕಸಭಾ ಸಭಾ ಚುನಾವಣೆ ಗೆಲ್ಲಲು ಹೊರಟಿದೆ. ರಾಜ್ಯ ಸರ್ಕಾರಕ್ಕೆ ಕೇಂದ್ರ ಸರ್ಕಾರ ನೀಡಬೇಕಾದ ಜಿಎಸ್‌ಟಿ ಹಣ ಹಣಕಾಸು ಆಯೋಗದ ನಿರ್ದೇಶನ ಮೇರೆಗೆ ಜಮಾವಾಗುತ್ತಿದೆ. ಬಿಜೆಪಿಯ ಜನಪ್ರಿಯತೆ, ನರೇಂದ್ರಮೋದಿಯವರ ಪ್ರಭಾವವನ್ನು ಕುಗ್ಗಿಸುವ ದೃಷ್ಠಿಯಿಂದ ಸುಳ್ಳು ಆರೋಪದ ಮೂಲಕ ದೆಹಲಿಯಲ್ಲಿ ಮುಷ್ಕರ ಮಾಡಲು ಹೊರಟಿದ್ದಾರೆ. ಕಾಂಗ್ರೆಸ್ ಪಕ್ಷ ಅಲ್ಲಿಯೂ ಸಹ ಮುಖಭಂಗ ಅನುಭವಿಸಲಿದೆ ಎಂದು ವಿಧಾನಪರಿಷತ್ ಮುಖ್ಯಸಚೇತಕ, ಬಿಜೆಪಿ ಹಿರಿಯ ದುರೀಣ ಎನ್. ರವಿಕುಮಾರ್ ತಿಳಿಸಿದರು.

ಅವರು, ಪಕ್ಷ ಸಂಘಟನೆ ಹಿನ್ನೆಲೆಯಲ್ಲಿ ಚಿತ್ರದುರ್ಗ ಜಿಲ್ಲೆ ಪ್ರವಾಸ ಕೈಗೊಂಡಿದ್ದು, ಮಂಗಳವಾರ ಚಳ್ಳಕೆರೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಪ್ರವಾಸ ಕೈಗೊಂಡು ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿಯಾಗಿಆಯ್ಕೆಯಾದ ಬಾಳೆಮಂಡಿರಾಮದಾಸ್‌ರವರನ್ನು ಭೇಟಿ ನೀಡಿ ಅಭಿನಂದಿಸಿ ಮಾತನಾಡಿದರು.



ಚಳ್ಳಕೆರೆ ನಗರಕ್ಕೆ ಮಂಗಳವಾರ ಭೇಟಿ ನೀದಿದ್ದ ವಿಧಾನಪರಿಷತ್ ಮುಖ್ಯಸಚೇತಕ, ಬಿಜೆಪಿ ಹಿರಿಯ ದುರೀಣ ಎನ್.ರವಿಕುಮಾರ್‌ರವರನ್ನು ಅಭಿಮಾನಿಗಳು ಸ್ವಾಗತಿಸಿ ಅಭಿನಂದಿಸಿದರು.

ರಾಜ್ಯ ಹಾಗೂ ರಾಷ್ಟ್ರದ ಜನತೆ ತುಂಬಾ ಪ್ರತಿಭಾವಂತರಿದ್ದಾರೆ. ಕಾಂಗ್ರೆಸ್ ಪಕ್ಷದ ಹಸಿಸುಳ್ಳು ಚುನಾವಣೆಯಲ್ಲಿ ಅವರಿಗೆ ತಿರುಗಬಾಣವಾಗಲಿದೆ. ಕೇಂದ್ರ ಸರ್ಕಾರದ ವಿರುದ್ದ ಮುಷ್ಕರ ಮಾಡಲು ದಿನಪತ್ರಿಕೆಗಳಿಗೆ ಕೋಟ್ಯಾಂತರ ರೂಪಾಯಿ ವೆಚ್ಚ ಮಾಡಿ ಸಾರ್ವಜನಿಕರ ತೆರಿಗೆ ಹಣವದಲ್ಲಿ ಜಾಹೀರಾತು ನೀಡಿ ಜನರನ್ನು ತಪ್ಪುದಾರಿಗೆ ಎಳೆಯುವ ಪ್ರಯತ್ನವಾಗಿದೆ.

ಕೇಂದ್ರ ವಿತ್ತಸಚಿವೆ ನಿರ್ಮಲಾಸೀತಾರಾಮನ್ ಈ ಬಗ್ಗೆ ಮಾಹಿತಿ ನೀಡಿದರೂ ಉದ್ದಘತನದಿಂದ ಕಾಂಗ್ರೆಸ್ ನಾಯಕರು ಮುಷ್ಕರ ಮಾಡಲು ಹೊರಟಿದ್ದಾರೆ. ಎಂಟು ತಿಂಗಳ ಅವಧಿಯಲ್ಲಿ ರಾಜ್ಯದ ಯಾವ ಭಾಗದಲ್ಲೂ ಅಭಿವೃದ್ದಿ ಕಾಮಗಾರಿಗಳು ಕೈಗೊಂಡಿಲ್ಲ. ಜನತೆ ಈಗಾಗಲೇ ಕಾಂಗ್ರೆಸ್ ಪಕ್ಷ ಆಡಳಿತದಿಂದ ರೋಸಿಹೋಗಿದ್ದು, ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದ ಬಣ್ಣ ಬಯಲಾಗಲಿದೆ ಎಂದರು.

ಬಿಜೆಪಿ ಹಿರಿಯ ದುರೀಣ ಸಿ.ಬಿ.ಆದಿಭಾಸ್ಕರಶೆಟ್ಟಿ, ಮಾಜಿ ಮಂಡಲಾಧ್ಯಕ್ಷ ಸೋಮಶೇಖರಮಂಡಿಮಠ, ರಾಜ್ಯ ಕಾರ್ಯದರ್ಶಿ ಶರಣತಳ್ಳಿಕೆರೆ, ಕರೀಕೆರೆತಿಪ್ಪೇಸ್ವಾಮಿ, ಜಗದಾಂಭ, ಟಿ.ಮಂಜುನಾಥ, ಬೇಕರಿ ಮಂಜುನಾಥ,ಶ್ರೀನಿವಾಸ್‌ಪ್ರಸಾದ್, ಈಶ್ವರನಾಯಕ, ಜೆ.ಕೆ.ತಿಪ್ಪೇಶ್ ಮುಂತಾದವರು ಉಪಸ್ಥಿತರಿದ್ದರು.

### ಭದ್ರಾಗೆ 5300 ಕೋಟಿ ಬಿಡುಗಡೆಗೊಳಿಸುವಂತೆ ಜಿಪಂ ಮುಂಭಾಗ 2ನೆ ದಿನಕ್ಕೆ ರೈತರ ಧರಣಿ



» ಚಿತ್ರದುರ್ಗ

ಭದ್ರಾಮೇಲ್ದಂಡೆ ಯೋಜನೆಯನ್ನು ರಾಷ್ಟ್ರೀಯ ಯೋಜನೆಯನ್ನಾಗಿ ಘೋಷಿಸಿರುವ ಕೇಂದ್ರ ಸರ್ಕಾರ 5300 ಕೋಟಿ ರೂ.ಗಳನ್ನು ಕಾಯ್ದಿರಿಸಿ ಇದುವರೆವಿಗೂ ಬಿಡುಗಡೆಗೊಳಿಸದಿರುವುದನ್ನು ವಿರೋಧಿಸಿ ಮೂಲ ಸಿದ್ದಾಂತಗಳ ಯಜಮಾನಿಕೆಯಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರುಸೇನೆ, ಅಖಂಡ ಕರ್ನಾಟಕ ರಾಜ್ಯ ರೈತ ಸಂಘ, ವಿವಿಧ ಜನಪರ ಸಂಘಟನೆಗಳೊಂದಿಗೆ ಜಿಲ್ಲಾ ಪಂಚಾಯಿತಿ ಮುಂಭಾಗ ನಡೆಸುತ್ತಿರುವ ಅನಿರ್ಧಿಷ್ಟಾವಧಿ ಧರಣಿ ಸತ್ಯಾಗ್ರಹದ ಎರಡನೆ ದಿನವಾದ ಮಂಗಳವಾರ ಹುಣಸೆಕಟ್ಟೆ ಗ್ರಾಮದ ಅಹೋಬಲ ಭಜನಾ ತಂಡದವರು ಧರಣಿಯಲ್ಲಿ ಸಂಜೆಯವರೆಗೂ ಭಜನೆ ಮಾಡಿದರು. ಭಜನೆಯಲ್ಲಿ ಮಕ್ಕಳು ಪಾಲ್ಗೊಂಡಿದ್ದು, ವಿಶೇಷವಾಗಿತ್ತು.

ಧರಣಿಯನ್ನುದ್ದೇಶಿಸಿ ಮಾತನಾಡಿದ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರುಸೇನೆ ಕಾರ್ಯಾಧ್ಯಕ್ಷ ಈಚಘಟ್ಟದ ಸಿದ್ದವೀರಪ್ಪ ಜಿಲ್ಲೆಯಲ್ಲಿ ಈಗಾಗಲೆ ಬರಗಾಲ ತಲೆದೋರಿದ್ದು, ಇದಕ್ಕೆ ಶಾಶ್ವತ ಪರಿಹಾರವೆಂದರೆ ಭದ್ರಾಮೇಲ್ದಂಡೆ ಯೋಜನೆಯೊಂದೆ ಎನ್ನುವುದನ್ನು ಕಳೆದ ತಿಂಗಳು ಕೇಂದ್ರ ಮಂತ್ರಿ ಎ.ನಾರಾಯಣಸ್ವಾಮಿರವರಿಗೆ ಮನವಿ ಪತ್ರ ನೀಡಿ ಧರಣಿ ಸತ್ಯಾಗ್ರಹ ನಡೆಸುವುದಾಗಿ ಮೊದಲೆ ತಿಳಿಸಿದ್ದೆವು. ಆದರೂ ನಮ್ಮ ಮನವಿಯನ್ನು ನಿರ್ಲಕ್ಷಿಸಿರುವ ಕೇಂದ್ರ ಸರ್ಕಾರ ಭದ್ರಾಮೇಲ್ದಂಡೆ ಯೋಜನೆಯನ್ನು ತುರ್ತಾಗಿ ಮುಗಿಸುವಂತೆ ಕಾಣುತ್ತಿಲ್ಲ. ಕಾಯ್ದಿರಿಸಿರುವ 5300 ಕೋಟಿ ರೂ.ಗಳನ್ನು ಶೀಘ್ರವೇ ಬಿಡುಗಡೆಗೊಳಿಸಿ ಎಲ್ಲೆಲ್ಲಿ ಸಮಸ್ಯೆಯಿದೆಯೋ ಅವುಗಳನ್ನೆಲ್ಲಾ ನಿವಾರಿಸಿ ಯೋಜನೆಯನ್ನು ಪೂರ್ಣಗೊಳಿಸಿ ಜಿಲ್ಲೆಗೆ ನೀರು ಹರಿಸುವತನಕ ಧರಣಿಯಿಂದ ಹಿಂದೆ ಸರಿಯುವುದಿಲ್ಲವೆಂಬ ಎಚ್ಚರಿಕೆ ನೀಡಿದರು.

## ಪ್ರಮುಖ ಸುದ್ದಿ

### ರಾಜ್ಯಮಟ್ಟದ ಅಬಾಕಸ್ ಪದವಿಪ್ರಧಾನ ಸಮಾರಂಭ ಯಶಸ್ವಿ

# ವಿದ್ಯಾರ್ಥಿಗಳ ಕಲಿಕೆಯಲ್ಲಿ ಅಬಾಕಸ್‌ನ ಪಾತ್ರ ಪ್ರಶಂಸನೀಯ

» ಚಳ್ಳಕೆರೆ

ವಿದ್ಯಾರ್ಥಿಗಳ ಕಲಿಕೆಯಲ್ಲಿ ಕಷ್ಟವಾದ ಗಣಿತ ವಿಷಯವನ್ನು ಎಲ್ಲಾ ವಿದ್ಯಾರ್ಥಿಗಳು ಸುಗಮವಾಗಿ ಅರ್ಥಮಾಡುವಂತೆ ಮಾಡುವಲ್ಲಿ ಅಬಾಕಸ್ ತರಬೇತಿ ಯಶಸ್ವಿ ಪ್ರಯೋಗವಾಗಿದೆ. ವಿಶೇಷವಾಗಿ ಇಲ್ಲಿನ ಚಿಗುರು ಅಬಾಕಸ್ ಅಕಾಡೆಮಿ ಸತತಸವಾಗಿ ನಾಲ್ಕುವರ್ಷಗಳಿಂಧ ರಾಜ್ಯಮಟ್ಟದಲ್ಲಿ ಕಾರ್ಯಕ್ರಮ ಹಮ್ಮಿಕೊಂಡು ಎಲ್ಲರಿಗೂ ಸ್ಪೂರ್ತಿಯಾಗಿದೆ ಎಂದು ಬಾಪೂಜಿ ವಿದ್ಯಾಸಂಸ್ಥೆಯ ಕನ್ನಡಪ್ರಾಧ್ಯಾಪಕ ಡಾ.ಜೆ.ವಿ.ರಾಜಣ್ಣ ತಿಳಿಸಿದರು.

ಅವರು, ನಗರದ ಗಾಯಿತ್ರಿ ಕಲ್ಯಾಣಮಂಟಪದಲ್ಲಿ ಚಿಗುರುಅಬಾಕಸ್ ಅಕಾಡೆಮಿ ಹಮ್ಮಿಕೊಂಡಿದ್ದ ರಾಜ್ಯಮಟ್ಟದ ಅಬಾಕಸ್ ಪದವಿಪ್ರಧಾನ ಸಮಾರಂಭ ಹಾಗೂ ನಾಲ್ಕನೇ ರಾಜ್ಯಮಟ್ಟದ ವೇದಗಣಿತ ಸ್ಪರ್ಧೆಯನ್ನು ಉದ್ಘಾಟಿಸಿ ಮಾತನಾಡಿದರು. ಚಿತ್ರದುರ್ಗ, ದಾವಣಗೆರೆ, ತುಮಕೂರು, ಕುಂದಾಪುರ, ಸಿರಿಸಿ, ಹೊನ್ನಾಳಿ, ಬೇಲೂರು ಸೇರಿದಂತೆ ರಾಜ್ಯದ ವಿವಿಧ ಜಿಲ್ಲೆಗಳಿಂದ ಸುಮಾರು




ವಿದ್ಯಾರ್ಥಿಗಳು ಈ ಸ್ಪರ್ಧೆಯಲ್ಲಿ ಭಾಗವಹಿಸಿದ್ದಾರೆ. ಚಿಗುರು ಅಬಾಕಸ್ ಅಕಾಡೆಮಿ ತನ್ನದೇಯಾದ ವಿಶೇಷ ಪರಿಶ್ರಮದಿಂದ ಇಂದು ರಾಜ್ಯಮಟ್ಟದಲ್ಲಿ ಗುರುತಿಸಿಕೊಳ್ಳುವಂತಾಗಿದೆ. ಅಂತರಾಷ್ಟ್ರೀಯ ಮಟ್ಟದಲ್ಲಿ ಖ್ಯಾತಿಗಳಿಸಲಿ ಎಂದು ಶುಭಹಾರೈಸಿದರು.

ಮೊಳಕಾಲ್ಮೂರು ಪದವಿಪೂರ್ವ ಕಾಲೇಜಿನ ಉಪಪ್ರಾಂಶುಪಾಲ ಎ.ರಾಜಣ್ಣ ಮಾತನಾಡಿ, ವಿದ್ಯಾರ್ಥಿಗಳಿಗೆ ಮನಮುಟ್ಟುವಂತೆ ಬೋಧನೆ ಮಾಡುವಲ್ಲಿ ಅಬಾಕಸ್ ಯಶಸ್ವಿ ಹೆಜ್ಜೆ ಇಟ್ಟಿದೆ. ಕೇವಲ ಕೇಲವು ವಿದ್ಯಾರ್ಥಿಗಳು ಅಬಾಕಸ್‌ಗೆ ದಾಖಲಾಗುತ್ತಿದ್ದರು. ಈಗ ರಾಜ್ಯಮಟ್ಟದಿಂದ 600ಕ್ಕೂ ಹೆಚ್ಚು ವಿದ್ಯಾರ್ಥಿಗಳು ಈ ಕಾರ್ಯಕ್ರಮದಲ್ಲಿ ಭಾಗವಹಿಸಿ ತಮ್ಮ ಸಾಮರ್ಥ್ಯ ಪ್ರದರ್ಶಿಸಿರುವುದು ಸಂತಸ ತಂದಿದೆ ಎಂದರು.

ರಾಜ್ಯಮಟ್ಟದ ವೇದಗಣಿತ ಸ್ಪರ್ಧೆಯಲ್ಲಿ ಕೃತಿ, ತ್ರಿಷಿಕಾ,ಪ್ರೀತಮ್, ರಿತ್ವಿಕ್ ಎಸ್.ನಾಯ್ಕ,ಅನುಷ್ಕ, ಸುಪ್ರೀತಾ ಮುಂತಾದವರು ಪ್ರಶಸ್ತಿ ಪಡೆದರು. ಕಾರ್ಯಕ್ರಮದಲ್ಲಿ ಸಂಸ್ಥೆಯ ಅಧ್ಯಕ್ಷೆ ಅರುಣಾ, ರಾಘವೇಂದ್ರ, ಸಹ ಶಿಕ್ಷಕ ಚನ್ನಬಸಪ್ಪ, ನಾಗೇಂದ್ರಪ್ಪ, ಗಣೇಶ್, ಹರೀಶ್, ಕಿಶೋರ್, ಸಿದ್ದೇಶ್ ಮುಂತಾದವರು ಭಾಗವಹಿಸಿದ್ದರು.

ಫಾಸ್ಟ್ ನ್ಯೂಸ್

## ಜಿಲ್ಲಾಧಿಕಾರಿಗಳಿಂದ ವಿವಿಧ ಸ್ಥಳಗಳ ಪರಿಶೀಲನೆ



» **ದಾವಣಗೆರೆ**

ಜಿಲ್ಲಾಧಿಕಾರಿ ಡಾ.ವೆಂಕಟೇಶ್.ಎಂ.ವಿ ಇವರು ಮಂಗಳವಾರ (ಫೆ.6) ರಂದು ದಾವಣಗೆರೆ ನಗರದ ಮಧ್ಯಭಾಗದಲ್ಲಿರುವ ಲೋಕೋಪಯೋಗಿ ಇಲಾಖೆ ಸಿಬ್ಬಂದಿಯವರ ವಸತಿಗೃಹ ಕಟ್ಟಡದ ಪರಿಶೀಲನೆ ನಡೆಸಿ ಸಿಬ್ಬಂದಿಯವರ ಕುಂದು ಕೊರತೆ ವಿಚಾರಿಸಿ ಮೂಲಭೂತ ಸೌಕರ್ಯ ಅಳವಡಿಸಲು ಮತ್ತು ಸಮರ್ಪಕ ನೀರು ಪೂರೈಕೆ ಮಾಡಲು ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದರು. ನಂತರ ದಾವಣಗೆರೆ ನಗರದ ರಾಷ್ಟ್ರೀಯ ಹೆದ್ದಾರಿ ಪಕ್ಕ ಸರ್ಕ್ಯೂಟ್ ಹೌಸ್ ಪಕ್ಕದಲ್ಲಿರುವ ಜಾಗದಲ್ಲಿ ಅಂಬೇಡ್ಕರ್ ಭವನ ನಿರ್ಮಿಸುವ ಉದ್ದೇಶದಿಂದ ಸ್ಥಳ ಪರೀಶೀಲನೆ ನಡೆಸಿದರು. ಮಹಾನಗರ ಪಾಲಿಕೆ ಆಯುಕ್ತರು ಮತ್ತು ನಗರ ಅಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರು, ಲೋಕೋಪಯೋಗಿ ಇಲಾಖೆ ಅಧಿಕಾರಿಗಳೊಂದಿಗೆ ಪರಿಶೀಲನೆ ನಡೆಸಿದರು.

ದಾವಣಗೆರೆ ನಗರದ ಎಸ್ಎಸ್ಎಂ ಬಡಾವಣೆಯಲ್ಲಿ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಖಾಲಿ ಇರುವ ಜಾಗದಲ್ಲಿ ಕಸಾಯಿ ಖಾನೆ ನಿರ್ಮಿಸಲು ನಿಗದಿಪಡಿಸಿರುವ ಜಾಗವನ್ನು ಪರಿಶೀಲನೆ ಮಾಡಿದರು. ದಾವಣಗೆರೆ ನಗರದ ಡಿಸ್ಟ್ರಿಕ್ ಫೈರ್ ಆಫೀಸ್ ಕಚೇರಿಗೆ ಭೇಟಿ ನೀಡಿ ಇಲ್ಲಿನ ಕಾರ್ಯವೈಖರಿ ಬಗ್ಗೆ ಪರಿಶೀಲನೆ ನಡೆಸಿ ಕಚೇರಿ ಕಟ್ಟಡ ಸ್ವಚ್ಛತೆ ಮತ್ತು ಸಿಬ್ಬಂದಿಯವರ ಕುಂದು ಕೊರತೆ ವಿಚಾರಿಸಿ ಜನಸ್ನೇಹಿಯಾಗಿ ಜನಪರವಾಗಿ ಕಾರ್ಯನಿರ್ವಾಹಿಸಲು ಸೂಚಿಸಿದರು. ಪಾಲಿಕೆ ಆಯುಕ್ತರಾದ ರೇಣುಕಾ, ಕಾರ್ಯಪಾಲಕ ಇಂಜಿನಿಯರ್ ನರೇಂದ್ರಬಾಬು, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರಾದ ಮಹಾಂತೇಶ್ ಹಾಗೂ ಪಾಲಿಕೆ ಅಧಿಕಾರಿಗಳು, ಸಿಬ್ಬಂದಿಗಳು ಉಪಸ್ಥಿತರಿದ್ದರು.

## ಮಹಾನಗರಪಾಲಿಕೆ ಅನುದಾನದಡಿ ವಿಶೇಷ ಚೇತನರ ಕಲ್ಯಾಣ ಕ್ರಿಯಾ ಯೋಜನೆ ತಯಾರಿಕೆ ಕುರಿತು ಕಾರ್ಯಾಗಾರ

» **ದಾವಣಗೆರೆ**

ಜಿಲ್ಲಾಡಳಿತ, ಮಹಾನಗರಪಾಲಿಕೆ, ಜಿಲ್ಲಾ ಪಂಚಾಯಿತಿ ಮತ್ತು ಸ್ಫೂರ್ತಿ ಸಂಸ್ಥೆ ದಾವಣಗೆರೆ ಇವರುಗಳ ಸಂಯುಕ್ತಾಶ್ರಯದಲ್ಲಿ ಫೆ.7 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಮಹಾನಗರಪಾಲಿಕೆ & ವಿವಿಧ ಇಲಾಖೆ ಅಧಿಕಾರಿಗಳಿಗೆ 5%ರ ಅನುದಾನದಡಿಯಲ್ಲಿ ವಿಶೇಷ ಚೇತನರ ಕಲ್ಯಾಣ ನಿಧಿಯಡಿ ಕ್ರಿಯಾ ಯೋಜನೆ ತಯಾರಿಸುವುದು ಹಾಗೂ ಇದರ ಅಡೆ-ತಡೆ ನಿವಾರಣೆ ಕುರಿತು ಒಂದು ದಿನದ ಕಾರ್ಯಾಗಾರವನ್ನು ಆಯೋಜಿಸಲಾಗಿದೆ. ಕಾರ್ಯಕ್ರಮವನ್ನು ಜಿಲ್ಲಾಧಿಕಾರಿ ಡಾ.ವೆಂಕಟೇಶ್. ಎಂ.ವಿ ಉದ್ಘಾಟಿಸುವರು. ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ್. ಮ.ಕರೆಣ್ಣವರ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಜಿ.ಪಂ.ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಬಿ. ಇಟ್ನಾಳ್, ಮಹಾನಗರಪಾಲಿಕೆ ಆಯುಕ್ತರಾದ ರೇಣುಕ, ವಿ.ಹಿ.ನಾ.ಸ ಇಲಾಖೆಯ ರಾಜ್ಯ ಆಯುಕ್ತರಾದ ರಾಜಣ್ಣ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣಾಧಿಕಾರಿ ಡಾ.ಕೆ.ಪ್ರಕಾಶ, ರಾಷ್ಟ್ರೀಯ ದೃಷ್ಟಿ ದೋಷರ ಒಕ್ಕೂಟದ ರಾಜ್ಯ ಕಾರ್ಯದರ್ಶಿ ವೀರೇಶ್.ಎಂ, ಸ್ಫೂರ್ತಿ ಸಂಸ್ಥೆಯ ಮುಖ್ಯ ಕಾರ್ಯನಿರ್ವಾಹಕಾಧಿಕಾರಿ ಕೆ.ಬಿ.ರೂಪ್ಲನಾಯ್ಕ ಭಾಗವಹಿಸುವರು.

## ತುಂಗಭದ್ರಾ ನದಿಗೆ ಭದ್ರಾ ನೀರು, ಸಾರ್ವಜನಿಕರು ಎಚ್ಚರದಿಂದಿರಲು ಸೂಚನೆ

» **ದಾವಣಗೆರೆ**

ಬಹುಗ್ರಾಮ ಕುಡಿಯುವ ನೀರು ಯೋಜನೆ, ಜಾತ್ರಾ ಮಹೋತ್ಸವದ ಉದ್ದೇಶದಿಂದ ಜಲಾಶಯದಿಂದ ತುಂಗಭದ್ರಾ ನದಿಗೆ ನೀರು ಹರಿಸಲಾಗುತ್ತಿದ್ದು ಸಾರ್ವಜನಿಕರು ನದಿ ದಂಡೆಗೆ ಬಾರದಂತೆ, ದಾಟದಂತೆ ಎಚ್ಚರಿಕೆ ವಹಿಸಬೇಕೆಂದು ಭದ್ರಾ ಜಲಾಶಯದ ನೀರಾವರಿ ಸಲಹಾ ಸಮಿತಿ ಸದಸ್ಯ ಕಾರ್ಯದರ್ಶಿ ಹಾಗೂ ಅಧೀಕ್ಷಕ ಇಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ನದಿಗೆ ಫೆಬ್ರವರಿ 5 ರಿಂದ 10 ರ ವರೆಗೆ ಪ್ರತಿದಿನ 2 ಸಾವಿರ ಕ್ಯೂಸೆಕ್ಸ್ ಮತ್ತು ಫೆ.18 ರಿಂದ 23 ರ ವರೆಗೆ ಪ್ರತಿದಿನ 500 ಕ್ಯೂಸೆಕ್ಸ್ ನೀರನ್ನು ಹರಿಸಲಾಗುತ್ತದೆ. ಹಾವೇರಿ, ಗದಗ, ಮತ್ತು ಬೆಟಗೇರಿ, ಕುಡಿಯುವ ನೀರಿಗಾಗಿ ಹರಿಸಲಾಗುವುದು.

**ರಾಷ್ಟ್ರಪಿತ ಮಹಾತ್ಮಗಾಂಧೀಜಿ 154ನೇ ಜಯಂತಿ ನಿಮಿತ್ತ ಆಯೋಜನೆ, ರಾಜ್ಯಾದ್ಯಂತ 12 ಸಾವಿರ ವಿದ್ಯಾರ್ಥಿಗಳು ಭಾಗಿ**

# ರಾಜ್ಯಮಟ್ಟದ ಬಾಪೂಜಿ ಪ್ರಬಂಧ ಸ್ಪರ್ಧೆ ವಿಜೇತರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಬಹುಮಾನ ವಿತರಣೆ

» **ಬೆಂಗಳೂರು**

ಮಹಾತ್ಮ ಗಾಂಧೀಜಿಯವರ ಬದುಕು, ಸ್ವಾತಂತ್ರ್ಯ, ಸರಳತೆ, ಅಹಿಂಸಾ ಮಾರ್ಗ, ಸಹಬಾಳ್ವೆ, ಅಸ್ಪೃಶ್ಯತೆ ನಿವಾರಣೆಗೆ ನಡೆಸಿದ ಪ್ರಯೋಗಗಳು ಸೇರಿದಂತೆ ವಿವಿಧ ವಿಷಯಗಳ ಕುರಿತು ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ 154 ನೇ ಜಯಂತಿ ನಿಮಿತ್ತ ಆಯೋಜಿಸಿದ್ದ ರಾಜ್ಯಮಟ್ಟದ ಬಾಪೂಜಿ ಪ್ರಬಂಧ ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಬಹುಮಾನಗಳನ್ನು ವಿತರಿಸಿದರು.



ಮುಖ್ಯಮಂತ್ರಿಗಳ ನಿವಾಸ ಕಾವೇರಿಯಲ್ಲಿ ಮಂಗಳವಾರ ಏರ್ಪಡಿಸಿದ್ದ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿಗಳು ರಾಜ್ಯ ಮಟ್ಟದ ಬಾಪೂಜಿ ಪ್ರಬಂಧ ಸ್ಪರ್ಧೆ ವಿಜೇತ 9 ವಿದ್ಯಾರ್ಥಿಗಳಿಗೆ ನಗದು ಬಹುಮಾನ ಹಾಗೂ ಪ್ರಶಸ್ತಿ ಪತ್ರಗಳು,ಸ್ಮರಣಿಕೆ ಹಾಗೂ ಗಾಂಧೀಜಿ ಅವರ ಜೀವ ಸಂದೇಶಗಳ ಕುರಿತು ಪುಸ್ತಕಗಳನ್ನು ವಿತರಿಸಿ ಶುಭಕೋರಿದರು.





ಈ ಸಂದರ್ಭದಲ್ಲಿ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಹಾತ್ಮ ಗಾಂಧೀಜಿಯವರ 154 ನೇ ಜಯಂತಿ ಸಂದರ್ಭದಲ್ಲಿ ವಿದ್ಯಾರ್ಥಿ, ಯುವಜನರಲ್ಲಿ ಮಹಾತ್ಮ ಗಾಂಧೀಜಿಯವರ ಜೀವನ-ಸಂದೇಶ ಹಾಗೂ ಅವರು ಸವೆಸಿದ ಹಾದಿ ಹಾಗೂ ಅವರು ಜೀವನದುದ್ದಕ್ಕೂ ಪಾಲಿಸಿಕೊಂಡು ಆದರ್ಶಗಳ ಕುರಿತು ಪ್ರೌಢಶಾಲೆ, ಪದವಿ ಪೂರ್ವ ಶಿಕ್ಷಣ ಹಾಗೂ ಪದವಿ-ಸ್ನಾತಕೋತ್ತರ ಪದವಿಗಳ ಹಂತದ ವಿದ್ಯಾರ್ಥಿಗಳಿಗೆ ಒಟ್ಟು 3 ಪ್ರತ್ಯೇಕ ವಿಭಾಗಗಳಲ್ಲಿ ಆಯೋಜಿಸಿದ್ದ ಪ್ರಬಂಧ ಸ್ಪರ್ಧೆಯಲ್ಲಿ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಸುಮಾರು 12 ಸಾವಿರಕ್ಕೂ ಅಧಿಕ ವಿದ್ಯಾರ್ಥಿಗಳು ಭಾಗವಹಿಸಿರುವುದು ಸಂತಸದ ಸಂಗತಿ ಎಂದರು.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಆಯುಕ್ತರಾದ ಹೇಮಂತ್ ನಿಂಬಾಳಕರ್ ಅವರು ಮಾತನಾಡಿ, ಗಾಂಧೀಜಿಯವರ ಜನ್ಮದಿನದ ನಿಮಿತ್ತ ಆಯೋಜಿಸಿದ್ದ ಪ್ರಬಂಧ ಸ್ಪರ್ಧೆಯಲ್ಲಿ "ನನಗೇಕೆ ಗಾಂಧೀಜಿ ಇಷ್ಟವಾಗುತ್ತಾರೆ, ನನ್ನ ಬದುಕಿನಲ್ಲಿ ಗಾಂಧೀಜಿ ತತ್ವಗಳನ್ನು ಅಳವಡಿಸಿಕೊಳ್ಳುವ ಬಗೆ, ಗಾಂಧೀಜಿಯವರ ತತ್ವಗಳಿಂದ ದೇಶ ಕಟ್ಟುವ ಬಗೆ. ದೇಶದ ಕಳಂಕವಾದ ಅಸ್ಪೃಶ್ಯತೆ ನಿವಾರಿಸುವಲ್ಲಿನ ಗಾಂಧೀಜಿಯವರ ಪ್ರಯೋಗಗಳು, ಗಾಂಧೀಜಿಯವರನ್ನು ಜಗತ್ತು ಗ್ರಹಿಸಿದ ರೀತಿ, ನನ್ನ ಬದುಕಿನಲ್ಲಿ ಗಾಂಧೀಜಿ ತತ್ವಗಳನ್ನು ಅಳವಡಿಸಿಕೊಳ್ಳುವ ಬಗೆ, ದೇಶ ನಿರ್ಮಾಣದಲ್ಲಿ ಗಾಂಧೀಜಿಯವರ ಜಾತ್ಯಾತೀತ ನಿಲುವುಗಳು, ಗಾಂಧೀಜಿಯವರ ಧಾರ್ಮಿಕ ಸಹಿಷ್ಣುತೆ ಚಿಂತನೆ, ಸ್ವಾತಂತ್ರ್ಯ ಮತ್ತು ಸಮಾನತೆಯ ಪರಿಕಲ್ಪನೆಗಳು, ವಿಷಯಗಳಿಗೆ ಸಂಬಂಧಿಸಿದಂತೆ ಪ್ರಬಂಧ ಸ್ಪರ್ಧೆ ಆಯೋಜಿಸಲಾಗಿತ್ತು ಎಂದರು.

ಜಿಲ್ಲಾ ಮಟ್ಟದಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಜಿಲ್ಲಾ ಹಂತದಲ್ಲಿಯೇ ಬಹುಮಾನ ವಿತರಿಸಲಾಗಿದೆ. ಜಿಲ್ಲೆಯಲ್ಲಿ ಪ್ರಥಮ ಸ್ಥಾನ ಪಡೆದ ಪ್ರಬಂಧಗಳನ್ನು ರಾಜ್ಯಮಟ್ಟದ ಸ್ಪರ್ಧೆಗೆ ಪರಿಗಣಿಸಲಾಗಿತ್ತು ಎಂದರು.

ಜಿಲ್ಲಾ ಮಟ್ಟದಲ್ಲಿ ಪ್ರಥಮ ಸ್ಥಾನ ಪಡೆದ ವಿದ್ಯಾರ್ಥಿಗಳ ಪ್ರಬಂಧಗಳನ್ನು ರಾಜ್ಯ ಮಟ್ಟದ ಸ್ಪರ್ಧೆಗೆ ಪರಿಗಣಿಸಲಾಗಿತ್ತು. ಮೂರು ವಿಭಾಗಗಳಲ್ಲಿ ಪ್ರತ್ಯೇಕವಾಗಿ ಪ್ರಥಮ ಸ್ಥಾನ-31,000, ದ್ವಿತೀಯ-21,000 ಹಾಗೂ ತೃತೀಯ-11,000 ರೂ.ಗಳ ನಗದು ಪುರಸ್ಕಾರ ನೀಡಲಾಯಿತು.

ವಿಜೇತರ ವಿವರ: ಪ್ರೌಢಶಾಲೆ ವಿಭಾಗದಲ್ಲಿ ಪ್ರಥಮ-ಅನಿರುದ್ಧ ಮನೋಜ್, ಸಂತ ಅನ್ನಮ್ಮ ಪ್ರೌಢಶಾಲೆ, ವಿರಾಜಪೇಟೆ,ಕೊಡಗು ಜಿಲ್ಲೆ, ದ್ವಿತೀಯ-ಹರ್ಷಿತ ಎನ್, ಸರ್ಕಾರಿ ಪ್ರೌಢಶಾಲೆ, ತುಂಗಣಿ, ಕನಕಪುರ ತಾ. ರಾಮನಗರ ಜಿಲ್ಲೆ, ತೃತೀಯ - ತೋಹಿದ್ ಅಹ್ಮದ್ ಲಾಡಜಿ, ಗೈಡ್ ಆಂಗ್ಲ ಮಾಧ್ಯಮ ಶಾಲೆ, ತಿಳವಳ್ಳಿ, ಹಾನಗಲ್ ತಾಲ್ಲೂಕು, ಹಾವೇರಿ ಜಿಲ್ಲೆ.

ಪದವಿ ಪೂರ್ವ ವಿಭಾಗದಲ್ಲಿ ಪ್ರಥಮ-ಹೃತ್ಪೂರ್ವಕ್ ಕೆ.ಎಸ್. ಸಂತ ಮೈಕೇಲ್ ಕಾಲೇಜು, ಮಡಿಕೇರಿ ಕೊಡಗು ಜಿಲ್ಲೆ, ದ್ವಿತೀಯ-ಉದಯಕುಮಾರ್ ಎಂ.ಎಸ್. ಸರ್ಕಾರಿ ಪ.ಪೂ.ಕಾಲೇಜು ಮಂಡ್ಯ, ತೃತೀಯ-ಮೀನಎಂ,ಶ್ರೀಕೊಂಗಾಡಿಯಪ್ಪ ಪಿ.ಯು.ಕಾಲೇಜು, ದೊಡ್ಡಬಳ್ಳಾಪುರ ಬೆಂಗಳೂರು ಗ್ರಾಮಾಂತರ ಜಿಲ್ಲೆ

ಪದವಿ/ಸ್ನಾತಕೋತ್ತರ ವಿಭಾಗದಲ್ಲಿ ಪ್ರಥಮ-ದರ್ಶಿನಿ ಡಿ,ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಶಿವಮೊಗ್ಗ, ದ್ವಿತೀಯ-ಕಾವ್ಯಾ ಚಿಪ್ಪಲಕಟ್ಟಿ, ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಬಾಗಲಕೋಟ, ತೃತೀಯ-ಕುಸುಮಾಬಾಯಿ ಆರ್. ಜೆ.ಎಸ್.ಎಸ್. ಕಲಾ ಕಾಲೇಜು ಮೈಸೂರು ಇವರು ವಿಜೇತರಾಗಿದ್ದಾರೆ.

ಈ ಸಂದರ್ಭದಲ್ಲಿ ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರಾದ ಕೆ.ವಿ.ಪ್ರಭಾಕರ್, ಮುಖ್ಯಮಂತ್ರಿಯವರ ಕಾರ್ಯದರ್ಶಿ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಕಾರ್ಯದರ್ಶಿಗಳಾದ ಡಾ. ಕೆ.ವಿ.ತ್ರಿಲೋಕಚಂದ್ರ, ಆಯುಕ್ತರಾದ ಹೇಮಂತ್ ಎಂ.ನಿಂಬಾಳ್ಕರ್, ಇಲಾಖೆಯ ಜಂಟಿ ನಿರ್ದೇಶಕರುಗಳಾದ ಮಂಜುನಾಥ ಡೊಳ್ಳಿನ್, ಸಿದ್ದೇಶ್ವರಪ್ಪ ಜಿ.ಬಿ, ಉಪನಿರ್ದೇಶಕ ರಾಮಲಿಂಗಪ್ಪ ಬಿ.ಕೆ. ಮತ್ತಿತರರು ಇದ್ದರು.

# ಪಿಟಿಸಿಎಲ್ ಕಾಯಿದೆ ತೀರ್ಪು ವಿಳಂಬ; ಪ್ರತಿಭಟನೆ

» **ಚಿತ್ರದುರ್ಗ**


ರಾಜ್ಯ ಸಚಿವ ಸಂಪುಟದಲ್ಲಿ ಪಿ.ಟಿ.ಸಿ.ಎಲ್. ಕಾಯಿದೆ ತಿದ್ದುಪಡಿ ಮಾಡಿ 8 ತಿಂಗಳಾದರೂ ಅಧಿಕಾರಿಗಳು ತೀರ್ಪು ನೀಡದೆ ವಿಳಂಭ ಮಾಡುತ್ತಿರುವುದನ್ನು ವಿರೋಧಿಸಿ ಅಂಬೇಡ್ಕರ್ ಸ್ವಾಭಿಮಾನಿ ಸೇನೆ ವತಿಯಿಂದ ಜಿಲ್ಲಾಧಿಕಾರಿ ಕಚೇರಿ ಎದುರು ಮಂಗಳವಾರ ಪ್ರತಿಭಟನೆ ನಡೆಸಿ ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಲಾಯಿತು.




**ಪಿ.ಟಿ.ಸಿ.ಎಲ್. ಕಾಯಿದೆ ತಿದ್ದುಪಡಿಯಾಗಿ ಎಂಟು ತಿಂಗಳಾದರೂ ತೀರ್ಪು ನೀಡುವಲ್ಲಿ ವಿಳಂಭ ಮಾಡುತ್ತಿರುವ ಅಧಿಕಾರಿಗಳ ವಿರುದ್ದ ಅಂಬೇಡ್ಕರ್ ಸ್ವಾಭಿಮಾನಿ ಸೇನೆಯಿಂದ ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ.**

ವಾದ-ಪ್ರತಿವಾದಗಳು ಮುಗಿದಿದ್ದರೂ ಸಹಾ ನ್ಯಾಯಾಲಯಗಳಲ್ಲಿ ಆದೇಶವನ್ನು ನೀಡದೆ ಪ್ರಕರಣಗಳು ಬಾಕಿಯಿರುವುದರಿಂದ ತಮ್ಮ ಹಂತದಲ್ಲಿಯೇ ಪರಿಶೀಲಿಸಿ ತುರ್ತಾಗಿ ತೀರ್ಪು ನೀಡಬೇಕೆಂದು ಜಿಲ್ಲಾಧಿಕಾರಿಯವರಲ್ಲಿ ಅಂಬೇಡ್ಕರ್ ಸ್ವಾಭಿಮಾನಿ ಸೇನೆಯವರು ವಿನಂತಿಸಿದರು. ಜಿಲ್ಲೆಯ ಮೂಲ ವಾರಸುದಾರರು ಆದೇಶ ಪಡೆದುಕೊಂಡು ಕೆಲವು ಪ್ರಕರಣಗಳು ಅಂತಿಮವಾಗಿದ್ದರೂ ಸ್ವಾಧೀನಕ್ಕೆ ಕೆಲವು ಕ್ರಯದಾರರು ಅಡಚಣೆಯುಂಟು ಮಾಡುತ್ತಿದ್ದಾರೆ. ಭೂಮಂಜೂರಾತಿಯ ವಿದ್ಯಮಾನಗಳನ್ನು ಸರಿಯಾಗಿ ಅರ್ಥೈಸಿಕೊಳ್ಳದಿರುವುದೆ ಇದಕ್ಕೆ ಕಾರಣ.ಎರಡುತಿಂಗಳಹಿಂದೆಚಳ್ಳಕೆರೆ ಟೌನ್ ಕಸಬಾ ಹೋಬಳಿಯಲ್ಲಿ ಪಿ.ಟಿ.ಸಿ.ಎಲ್. ಕಾಯ್ದೆ ಉಲ್ಲಂಘಿಸಿ ಉಪ ವಿಭಾಗಾಧಿಕಾರಿಗಳು ಕ್ರಯದಾರರ ಪರವಾಗಿ ಆದೇಶಿಸಿದ್ದಾರೆ. ಪಿ.ಟಿ.ಸಿ.ಎಲ್. ಕಾಯ್ದೆ ಪ್ರಕಾರ ಮೂಲ ಮಂಜೂರುದಾರರಿಗೆ ಕಾನೂನು ರೀತಿಯ ತೀರ್ಪು ನೀಡಬೇಕು. ಉಪ ವಿಭಾಗಾಧಿಕಾರಿಗಳ ಕಚೇರಿಯಲ್ಲಿ ಎಲ್ಲಾ ಪಿ.ಟಿ.ಸಿ.ಎಲ್. ಕೇಸುಗಳನ್ನು ಸ್ವಯಂ ದಾಖಲಿಸಿ ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗದವರಿಗೆ ಕಾಯ್ದೆ ಬಗ್ಗೆ ಅರಿವು ಮೂಡಿಸಿ ತ್ವರಿತವಾಗಿ ನ್ಯಾಯ ಒದಗಿಸುವಂತೆ ಪ್ರತಿಭಟನಾನಿರತರು ಜಿಲ್ಲಾಧಿಕಾರಿಯವರನ್ನು ಕೋರಿದರು.ಅಂಬೇಡ್ಕರ್ ಸ್ವಾಭಿಮಾನಿ ಸೇನೆ ರಾಜ್ಯಾಧ್ಯಕ್ಷ ಡಾ.ಆರ್. ಕೋದಂಡರಾಮ್, ಜಿಲ್ಲಾಧ್ಯಕ್ಷ ರಾಮಚಂದ್ರಕೆ.ಗೌರವಾಧ್ಯಕ್ಷಪಿ.ಎಂ. ತಿಪ್ಪೇಸ್ವಾಮಿ, ತಾಲ್ಲೂಕು ಅಧ್ಯಕ್ಷ ಮೊಹಮದ್ ರಫಿ, ರಾಘವೇಂದ್ರ ಆರ್. ವಿನೋದ್‌ಕುಮಾರ್, ಸಾಧಿಕ್ ಚನ್ನಗಿರಿ, ಕಣುಮೇಶ್, ದಾದಾಪೀರ್ ಎಸ್. ದುರ್ಗೇಶ್, ಕುಮಾರ್, ರಘು, ಮಹಾಲಿಂಗಪ್ಪ ಇನ್ನು ಅನೇಕರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

# ನಾಯಕನಹಟ್ಟಿ ಪಪಂ ಆಧಿಕಾರಿಯಾಗಿ ಪಾಲಯ್ಯ ಅಧಿಕಾರ ಸ್ವೀಕಾರ



**ನಾಯಕನಹಟ್ಟಿ:** ಪಟ್ಟಣ ಪಂಚಾಯಿತಿ ಪ್ರಭಾರ ಅಧಿಕಾರಿಗಳಾದ ಎಂ.ಶಿವಕುಮಾರ್ ಅಧಿಕಾರವನ್ನು ಹೊಸ ಮುಖ್ಯಾಧಿಕಾರಿಗಳಾದ ಪಿ.ಪಾಲಯ್ಯ ರವರಿಗೆ ಅಧಿಕಾರ ಹಸ್ತಾಂತರಿಸಿದರು. ಸಾಹಿತಿಯಾದ ಜಾಗನೂರಹಟ್ಟಿ ಮಂಜುನಾಥ್ ಮಾತನಾಡಿ ಎಂ.ಶಿವಕುಮಾರ್‌ರವರು ಉತ್ತಮ ಆಡಳಿತ ನೀಡಿ ಒಳ್ಳೆಯ ಕೆಲಸಗಳನ್ನು ಮಾಡಿದ್ದಾರೆ ಎಂದರು. ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಪಿ.ಪಾಲಯ್ಯರವರು ನಾಯಕನಹಟ್ಟಿ ಪಟ್ಟಣದ ಜನರಿಗೆ ಉತ್ತಮ ಕೆಲಸ ನಿರ್ವಹಿಸಬೇಕು ಹಾಗೂ ಮುಖ್ಯವಾಗಿ ಖಾತೆ, ಅಸೆಸ್‌ಮೆಂಟ್, ಕೆ.ಎಂ.ಎಫ್-24 ಇವುಗಳನ್ನು ಜನರಿಗೆ ಅನುಕೂಲ ಮಾಡಿಕೊಡಬೇಕು ಮತ್ತು ಈ ಹಿಂದೆ ರಿ.ಸ.ನಂ.-166ರಲ್ಲಿ 19 ಎಕರೆ 1 ಗುಂಟೆ ನಿವೇಶನ ರಹಿತ ಫಲಾನುಭವಿಗಳಿಗೆ ಅರ್ಜಿ ಕರೆದು ಅರ್ಜಿ ತೆಗೆದುಕೊಂಡಿದ್ದಾರೆ. ಆದರೆ ಇದೂವರೆಗೂ ಇದರ ಬಗ್ಗೆ ಯಾವ ಅಧಿಕಾರಿಗಳು ಗಮನಕೊಟ್ಟಿಲ್ಲ, ಆದ್ದರಿಂದ ಪಾಲಯ್ಯರವರು ಇವೆಲ್ಲವನ್ನೂ ಗಮನಹರಿಸಿ ಉತ್ತಮ ಆಡಳಿತ ಕೊಡಬೇಕೆಂದು ಎಂದು ಆಶಿಸಿದರು.

ಪ್ರಮುಖ ಸುದ್ದಿ

# ಸಂವಿಧಾನ ಜಾಗೃತಿ ಜಾಥಾ, ಡಾ; ಬಿ.ಆರ್.ಅಂಬೇಡ್ಕರ್ ಪ್ರತಿಮೆ ಸ್ಥಾಪನೆಗೆ ಕ್ರಮ; ಶಾಸಕರಾದ ಡಿ.ಜಿ.ಶಾಂತನಗೌಡ

» **ದಾವಣಗೆರೆ**

ಸಂವಿಧಾನ ಜಾಗೃತಿಗಾಗಿ ದಾವಣಗೆರೆ ಜಿಲ್ಲೆಯಾದ್ಯಂತ ಸಂವಿಧಾನ ಜಾಗೃತಿ ಜಾಥಾ ಕಾರ್ಯಕ್ರಮ ನಡೆಯುತ್ತಿದ್ದು ಮಂಗಳವಾರ ಹೊನ್ನಾಳಿ ತಾಲ್ಲೂಕಿನ ಬೇವಿನಹಳ್ಳಿಗೆ ಜಾಥಾ ಆಗಮಿಸಿದಾಗ ಮಾಲಾರ್ಪಣೆ ಮಾಡಿ ಸಂವಿಧಾನಕ್ಕೆ ಗೌರವ ಸೂಚಿಸುವ ಮೂಲಕ ಶಾಸಕರಾದ ಡಿ.ಜಿ.ಶಾಂತನಗೌಡರವರು ಡಾ; ಬಿ.ಆರ್. ಅಂಬೇಡ್ಕರ್ ಅವರ ಪ್ರತಿಮೆ ಸ್ಥಾಪನೆ ಮಾಡುವುದಾಗಿ ಭರವಸೆ ನೀಡಿದರು.



ಡಾ; ಬಿ.ಅರ್.ಅಂಬೇಡ್ಕರ್ ರವರು ದೇಶಕ್ಕೆ ನೀಡಿದ ಸಂವಿಧಾನ ಸರ್ವಕಾಲಕ್ಕೂ ಪ್ರಸ್ತುತವಾಗಿದ್ದು ಎಲ್ಲರಿಗೂ ಸಾಮಾಜಿಕ ನ್ಯಾಯ, ಸಮಾನ ಕಾನೂನು, ಅವಕಾಶಗಳನ್ನು ಕಲ್ಪಿಸಿಂತವರು. ಇವರ ತತ್ವಾದರ್ಶಗಳು ದೇಶದ ಜನರಿಗೆ ಸದಾ ಮಾದರಿಯಾಗಿದ್ದು ಇದನ್ನು ಶಾಶ್ವತವಾಗಿಸಲು ಬೇವಿನಹಳ್ಳಿ ಗ್ರಾಮದಲ್ಲಿ ಡಾ; ಬಿ.ಆರ್.ಅಂಬೇಡ್ಕರ್ ರವರ ಪ್ರತಿಮೆ ಜೊತೆಗೆ ಬುದ್ದ, ಬಸವ ಇವರ ಪ್ರತಿಮೆಗಳ ಸ್ಥಾಪನೆಗೆ ಕ್ರಮ ಕೈಗೊಳ್ಳಲಾಗುತ್ತದೆ ಎಂದರು.

ಬೇವಿನಹಳ್ಳಿ ಗ್ರಾಮದಲ್ಲಿ ಸ್ವಂತವಾಗಿ ಒಂದು ಎಕರೆ ಜಾಗವನ್ನು ದಲಿತರ ಸಾಮಾಜಿಕ ಕಾರ್ಯಗಳಿಗಾಗಿ ದಾನ ನೀಡುವುದಾಗಿ ವಾಗ್ದಾನ ಮಾಡಿದ ಶಾಸಕರು ದಲಿತ ಸಂಘರ್ಷ ಸಮಿತಿಯಿಂದ ವಿದ್ಯಾರ್ಥಿಗಳಿಗೆ ನೀಡಲಾದ ನೋಟ್ ಪುಸ್ತಕ ಮತ್ತು ಪೆನ್ನುಗಳನ್ನು ವಿತರಣೆ ಮಾಡಿದರು. ಈ ವೇಳೆ ಸಂವಿಧಾನದ ಪ್ರಸ್ತಾವನೆಯನ್ನು ಓದಿದರು.

ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಕೆ.ನಾಗರಾಜ್ ಇವರು ಪ್ರಾಸ್ತಾವಿಕವಾಗಿ ಮಾತನಾಡಿ ಸಂವಿಧಾನ ಜಾಗೃತಿ ಕಾರ್ಯಕ್ರಮವನ್ನು ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯಿತಿ ಕೇಂದ್ರ ಸ್ಥಳಗಳಲ್ಲಿ ಸಂಚರಿಸುವ ಮೂಲಕ ಜನಸಾಮಾನ್ಯರಲ್ಲಿ ಸಂವಿಧಾನದ ಬಗ್ಗೆ ಜಾಗೃತಿ ಮೂಡಿಸುವುದು ಇದರ ಉದ್ದೇಶವಾಗಿದ್ದು ಸಾರ್ವಜನಿಕರು ಜಾಥಾ ಬಂದಾಗ ಭಾಗವಹಿಸುವ ಮೂಲಕ ಸಂವಿಧಾನಕ್ಕೆ ಗೌರವ ಸಲ್ಲಿಸಬೇಕೆಂದು ಮನವಿ ಮಾಡಿದರು.

ಫೆಬ್ರವರಿ 7 ರಂದು ಹೊನ್ನಾಳಿ ತಾ; ಲಿಂಗಾಪುರ, ಹುಣಸಗಟ್ಟ, ಕ್ಯಾಸನಕೆರೆ, ಜಿ.ಕೋಮಾರನಹಳ್ಳಿ, ನಿಲಗೋಲ್, ದಾಗಿನಕಟ್ಟೆ, ಬಸವಪಟ್ಟಣನಲ್ಲಿ ಸಂಚರಿಸಿ ಕೋಟೆಹಾಳ್‌ನಲ್ಲಿ ಜಾಥಾ ನಿಲುಗಡೆಯಾಗಲಿದೆ. ಫೆ.8 ರಂದು ಹೊನ್ನಾಳಿ ತಾ; ಕೋಟೆಹಾಳ್, ಕುಂಬುಳೂರು, ಚನ್ನಗಿರಿ ತಾ; ಕತ್ತಲಗೆರೆ, ಕಾರಿಗನೂರು, ದಾವಣಗೆರೆ ತಾ; ಕುಕ್ಕವಾಡ, ಕೈದಾಳ್, ಲೋಕಿಕೆರೆ ಗ್ರಾಮ ಪಂಚಾಯಿತಿಗಳಲ್ಲಿ ಜಾಥಾ ಸಂಚರಿಸಲಿದೆ. ಈ ವೇಳೆ ಉಪವಿಭಾಗಾಧಿಕಾರಿ ಹುಲ್ಲುಮನೆ ತಿಮ್ಮಣ್ಣ, ಹೊನ್ನಾಳಿ ಹಾಗೂ ನ್ಯಾಮತಿ ತಹಶೀಲ್ದಾರರು ಉಪಸ್ಥಿತರಿದ್ದರು.


Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T